# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 20 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 01–08–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 20 | Title- Code: KARKAN 28269 | Chitradurga | Date: 01-08-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು
ತುಂಗಭದ್ರಾ ನದಿ ನೀರು 1,44,468 ಕ್ಯೂಸೆಕ್ಸ್‌ಗೆ ಏರಿಕೆ 2
ದುಶ್ಚಟಗಳನ್ನೇ ತಮ್ಮ ಜೋಳಿಗೆಯಲ್ಲಿ ಭಿಕ್ಷೆಯ ರೂಪದಲ್ಲಿ ಸಂಗ್ರಹ 3
ಸಾಲು ಸಾಲು ಸೋಲು ಹೊದ್ದು ಮಲಗಿರುವಾಗ.... 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಆಗಸ್ಟ್ 03ರಂದು ವಿಚಾರ ಸಂಕಿರಣ

» ಚಿತ್ರದುರ್ಗ

ಕೃಷಿ ತಂತ್ರಜ್ಞರ ಸಂಸ್ಥೆ ಪ್ರಾದೇಶಿಕ ಘಟಕ ಹಾಗೂ ಕೃಷಿ ಇಲಾಖೆ ಇವರ ಸಹಯೋಗದಲ್ಲಿ ಆಗಸ್ಟ್ 03ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ಕೃಷಿ ತಂತ್ರಜ್ಞರ ಸಂಸ್ಥೆಯ ಸಭಾಂಗಣದಲ್ಲಿ ಕಾರ್ಬನ್ ಸ್ವೀಕ್ವೇಸ್ಟ್ರೇಷನ್–ವ್ಯಾಖ್ಯಾನ, ಅನುಕೂಲಗಳು ಹಾಗೂ ಅನಾನುಕೂಲಗಳು, ಇಂಗಾಲದ ವ್ಯಾಪಾರ ಪ್ರಕ್ರಿಯೆಯ ಮತ್ತು ಪ್ರಾಮುಖ್ಯತೆಯ ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿದೆ. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಉದ್ಘಾಟಿಸುವರು. ಜಿಲ್ಲಾ ಪಂಚಾಯತ್ ಸಿಇಒ ಎಸ್.ಜೆ.ಸೋಮಶೇಖರ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ್, ಕೃಷಿ ಪರಿಸರ ವ್ಯವಸ್ಥೆಗಳ ಹಿರಿಯ ಸಲಹೆಗಾರ ಡಾ.ಹೆಚ್.ಬಿಂಧುಮಾದವ, ಬಬ್ಬೂರುಫಾರಂ ವಲಯ ಕೃಷಿ ತೋಟಗಾರಿಕೆ ಸಂಶೋಧನಾ ಕೇಂದ್ರದ ಸಹ ಸಂಶೋಧನಾ ನಿರ್ದೇಶಕ ಡಾ.ಸುರೇಶ ಏಕಬೋಟೆ, ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಓ.ಕುಮಾರ್, ಕೃಷಿ ತಂತ್ರಜ್ಞರ ಸಂಸ್ಥೆಯ ಅಧ್ಯಕ್ಷ ಜಿ.ಸಿ.ರಂಗಸ್ವಾಮಿ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶರಣ ಬಸಪ್ಪ ಭೋಗಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಟಿ.ರಾಜಣ್ಣ, ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕ ಡಾ.ಎನ್.ಕುಮಾರ್, ರೇಷ್ಮೆ ಇಲಾಖೆ ಉಪನಿರ್ದೇಶಕ ಮಾರಪ್ಪ ಬಿ.ಬೀರಲದಿನ್ನಿ ಭಾಗವಹಿಸುವರು. ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಅರಣ್ಯಶಾಸ್ತ್ರ ಮತ್ತು ಪರಿಸರ ವಿಜ್ಞಾನ ವಿಭಾಗದ ಮುಖ್ಯಸ್ಥ ಡಾ.ದೇವಕುಮಾರ್ ಉಪನ್ಯಾಸ ನೀಡುವರು.

### ಸಂಯೋಜಕರ ಹುದ್ದೆಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪೋಷಣ್ ಅಭಿಯಾನ್ ಯೋಜನೆಯಡಿ 2024–25ನೇ ಸಾಲಿಗೆ ಹೊಸದುರ್ಗ ಶಿಶು ಅಭಿವೃದ್ಧಿ ಯೋಜನೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಯೋಜನಾ ಸಂಯೋಜಕರ ಹುದ್ದೆಗೆ ಆಯ್ಕೆ ಮಾಡಿಕೊಳ್ಳಲು ಅರ್ಹ ವಿದ್ಯಾರ್ಹತೆ ಹೊಂದಿರುವ ಹೊಸದುರ್ಗ ತಾಲ್ಲೂಕಿನ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 1 ರಿಂದ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭವಾಗಲಿದ್ದು, ಆಗಸ್ಟ್ 20 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.ಹುದ್ದೆಯ ವಿವರ: ಯೋಜನಾ ಸಂಯೋಜಕ –1 ಹುದ್ದೆ ಖಾಲಿ ಇದ್ದು, ಈ ಹುದ್ದೆಗೆ ಪದವಿ ವಿದ್ಯಾರ್ಹತೆಯೊಂದಿಗೆ ಟೆಕ್ನಾಲಜಿ ಮತ್ತು ಸಾಫ್ಟ್‌ವೇರ್ ಅಪ್ಲಿಕೇಷನ್ ಸಪೋರ್ಟ್‌ನಲ್ಲಿ ಕನಿಷ್ಟ 2 ವರ್ಷಗಳ ಅನುಭವ ಹೊಂದಿರಬೇಕು. ಸ್ಥಳೀಯ ಭಾಷೆಯಲ್ಲಿ ಉತ್ತಮ ವಾದ ಮೌಖಿಕ ಹಾಗೂ ಲಿಖಿತ ಸಂವಹನ ಹೊಂದಿರಬೇಕು. ಸ್ಥಳೀಯ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು. ಐಟಿ/ಕಂಪ್ಯೂಟರ್‌ನಲ್ಲಿ ತರಬೇತಿ ಅತ್ಯಗತ್ಯವಾಗಿರಬೇಕು. ಯಾವುದೇ ಸಾಮಾಜಿಕ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ಕಾರ್ಯನಿರ್ವಹಿಸಿರಬೇಕು. ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ನಗರದ ಜಿಲ್ಲಾ ಬಾಲಭವನ ಆವರಣದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರ ಕಚೇರಿಯ ದೂರವಾಣಿ ಸಂಖ್ಯೆ 08194–234579 ಹಾಗೂ ಇ–ಮೇಲ್ ddwcdcta@gmail.com ಗೆ ಸಂಪರ್ಕಿಸಬಹುದು.

### ವ್ಯಸನಮುಕ್ತ ದಿನಾಚರಣೆ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ವಿವಿಧ ಸಂಘ–ಸಂಸ್ಥೆಗಳ ಸಹಯೋಗದಲ್ಲಿ ಆಗಸ್ಟ್ 01ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಅಂಗವಾಗಿ ಜಿಲ್ಲಾಮಟ್ಟದ ವ್ಯಸನಮುಕ್ತ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ.

## ವಾಲ್ಮೀಕಿ, ಮುಡಾ ಹಗರಣ
# ಸಿಎಂ ರಾಜಿನಾಮೆಗೆ ತಿಪ್ಪಾರೆಡ್ಡಿ ಆಗ್ರಹ

» ಚಿತ್ರದುರ್ಗ

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ 187 ಕೋಟಿ ರೂ.ಗಳ ಹಗರಣಕ್ಕೆ ಸಂಬಂಧಿಸಿದಂತೆ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ನೈತಿಕ ಹೊಣೆ ಹೊತ್ತು ರಾಜಿನಾಮೆ ನೀಡಬೇಕಿತ್ತು. ಆದರೆ ಭಂಡತನಕ್ಕೆ ಬಿದ್ದಿದ್ದಾರೆಂದು ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಲೇವಡಿ ಮಾಡಿದರು.

ಮಾಳಪ್ಪನಹಟ್ಟಿ ಸಮೀಪವಿರುತ ತಿರುಮಲ ಕಲ್ಯಾಣ ಮಂಟಪದಲ್ಲಿ ಬುಧವಾರ ನಡೆದ ಬಿಜೆಪಿ. ಜಿಲ್ಲಾ ವಿಶೇಷ ಕಾರ್ಯಕಾರಿಣಿ ಸಭೆ ಉದ್ಘಾಟಿಸಿ ಮಾತನಾಡಿದರು.

ಲೋಕಸಭೆ ಚುನಾವಣೆಯಲ್ಲಿ ಎಂಟು ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್‌ನ ಏಳು ಶಾಸಕರು, ಇಬ್ಬರು ಮಂತ್ರಿಗಳಿರುವುದರಿಂದ ಪಕ್ಷದ ಅಭ್ಯರ್ಥಿ ಗೆಲ್ಲುತ್ತಾರೆಂಬ ಭ್ರಮೆಯಲ್ಲಿದ್ದರು. ಆದರೆ ನಮ್ಮ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರುಗಳು ನಿಷ್ಟೆಯಿಂದ ಕೆಲಸ ಮಾಡಿದ ಪರಿಣಾಮ ಗೋವಿಂದ ಕಾರಜೋಳರವರ ಗೆಲುವು ಸುಲಭವಾಯಿತು. ವಾಲ್ಮೀಕಿ ಅಭಿವೃದ್ಧಿ ನಿಗಮದಿಂದ ಬ್ಯಾಂಕ್‌ಗೆ ಹಣ ವರ್ಗಾವಣೆಯಾದ ದಿನದಂದೆ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಾಲ ತೆಗೆದುಕೊಂಡಿರುವುದು ಇತಿಹಾಸ. ವಿಧಾನಸಭೆ ಅಧಿವೇಶನದಲ್ಲಿ ಸ್ಪೀಕರ್ ಯು.ಟಿ.ಖಾದರ್ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ ಕುರಿತು ಚರ್ಚಿಸಲು ಅವಕಾಶ ಕೊಟ್ಟರು. ಅದೇ ಮುಡಾದಲ್ಲಿ ನಡೆದಿರುವ ನಿವೇಶನಗಳ ಹಗರಣಕ್ಕೆ ಅವಕಾಶ ಕೊಡಲಿಲ್ಲ. ಏಕೆಂದರೆ ಮುಖ್ಯಮಂತ್ರಿ ಉತ್ತರ ಕೊಡುವುದು ಕಷ್ಟವಾಗುತ್ತದೆ ಎನ್ನುವುದು ಮೇಲ್ನೋಟಕ್ಕೆ ಗೊತ್ತಾಗುತ್ತದೆ ಎಂದರು.






ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾತನಾಡಿ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಆಡಳಿತದಲ್ಲಿದ್ದರೂ ಲೋಕಸಭೆ ಚುನಾವಣೆಯಲ್ಲಿ ನಮ್ಮ ಪಕ್ಷದ ಕಾರ್ಯಕರ್ತರು ಗಟ್ಟಿಯಾಗಿ ನಿಂತು ಕೆಲಸ ಮಾಡಿದ ಫಲವಾಗಿ ಗೋವಿಂದ ಕಾರಜೋಳರವರುಗೆಲ್ಲಲುಸಾಧ್ಯವಾಯಿತು. ಸಾಕಷ್ಟು ವಿರೋಧದ ನಡುವೆಯೇ ಕಟ್ಟ ಕಡೆಯ ಬೂತ್‌ನಲ್ಲಿ ಕಾರ್ಯಕರ್ತರು ಶಕ್ತಿ ಪ್ರದರ್ಶಿಸುವ ಜಾಣ್ಮೆ ತೋರಿದ್ದು, ನಿಜಕ್ಕೂ ಸಂತೋಷದ ಸಂಗತಿ. ಚುನಾವಣೆ ಪೂರ್ವದಲ್ಲಿ ಉಚಿತ ಗ್ಯಾರೆಂಟಿಗಳನ್ನು ಘೋಷಿಸಿ ಅಧಿಕಾರಕ್ಕೆ ಬಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಗ್ಯಾರೆಂಟಿಗಳನ್ನು ನೀಡಲು ಆಗುತ್ತಿಲ್ಲ. ಅದಕ್ಕಾಗಿ ಮೂರು ತಿಂಗಳಿಗೊಮ್ಮೆ ಹೊಸ ಸಾಲ ಎತ್ತುವ ಉಪಾಯ ಮಾಡುತ್ತ ರಾಜ್ಯವನ್ನು ದಿವಾಳಿಯಾಗಿಸುತ್ತಿದ್ದಾರೆಂದು ಟೀಕಿಸಿದರು.

ಇನ್ನು ಮೂರು ತಿಂಗಳಲ್ಲಿ ಜಿಲ್ಲಾ ಪಂಚಾಯಿತಿ ತಾಲ್ಲೂಕು ಪಂಚಾಯಿತಿ ಚುನಾವಣೆ ಎದುರಾಗಲಿದೆ. ಪಕ್ಷದ ಕಾರ್ಯಕರ್ತರಿಗೆ ಇದು ಅಗ್ನಿಪರೀಕ್ಷೆಯಾಗಿದ್ದು, ಚುನಾವಣೆಯನ್ನು ಎದುರಿಸಲು ಕಾರ್ಯಕರ್ತರೆ ಅಭ್ಯರ್ಥಿಗಳಾಗಿ ಈಗಿನಿಂದಲೆ ಸಿದ್ದತೆಯಾಗಬೇಕೆಂದು ಹೇಳಿದರು.

ಬಿಜೆಪಿ. ಜಿಲ್ಲಾಧ್ಯಕ್ಷ ಎ.ಮುರಳಿ ಅಧ್ಯಕ್ಷತೆ ವಹಿಸಿ ಮಾತನಾಡುತ್ತ ಉಚಿತ ಗ್ಯಾರೆಂಟಿಗಳ ಮೇಲೆ ಅಧಿಕಾರಕ್ಕೆ ಬಂದಿರುವ ರಾಜ್ಯ ಕಾಂಗ್ರೆಸ್ ಸರ್ಕಾರದ ವಾರೆಂಟಿ ಮುಗಿದಿದೆ. ದಲಿತರಿಗೆ, ರೈತರಿಗೆ ದ್ರೋಹವೆಸಗುತ್ತಿರುವ ಭ್ರಷ್ಠ ಕಾಂಗ್ರೆಸ್ ಸರ್ಕಾರವನ್ನು ರಾಜ್ಯದಿಂದ ಕಿತ್ತೊಗೆಯಬೇಕಾಗಿರುವುದರಿಂದ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆಯಲ್ಲಿ ಮತಗಳನ್ನು ಹೆಚ್ಚಿಸಬೇಕಿದೆ. ಯಾವ ವರ್ಗಕ್ಕೆ ಅನ್ಯಾಯವಾಗಿದೆಯೋ ಅಂತಹವರಿಗೆ ನ್ಯಾಯ ಒದಗಿಸುವ ಕೆಲಸ ಮಾಡಬೇಕೆಂದು ಕರೆ ನೀಡಿದರು. ಮುಡಾ ಹಗರಣದಲ್ಲಿ ಸಿಲುಕಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ದ ಆ.3 ರಂದು ಬೆಂಗಳೂರಿನಿಂದ ಮೈಸೂರಿಗೆ ಹೊರಡುವ ಪಾದಯಾತ್ರೆಯಲ್ಲಿ ಜಿಲ್ಲೆಯಿಂದ ಒಂದು ಸಾವಿರ ಮಂದಿ ಪಾಲ್ಗೊಳ್ಳಬೇಕೆಂದು ಕರೆ ನೀಡಿದರು.

ಕಾಂಗ್ರೆಸ್ ಸರ್ಕಾರದ ಆಯಸ್ಸು ಮುಗಿಯುತ್ತ ಬಂದಿದೆ. ಹೋರಾಟದ ಕಿಚ್ಚು ಇಲ್ಲದಿದ್ದರೆ ಪಕ್ಷ ಗಟ್ಟಿಯಾಗಲು ಸಾಧ್ಯವಿಲ್ಲ. ವಾಲ್ಮೀಕಿ ಅಭಿವೃದ್ದಿ ನಿಗಮದಲ್ಲಿ ನಡೆದಿರುವ 187 ಕೋಟಿ ರೂ.ಗಳ ಹಗರಣವನ್ನು ಪ್ರತಿ ಗ್ರಾಮ ಮಟ್ಟಕ್ಕೆ ಮುಟ್ಟಿಸಿ ಜನರ ಮನಃ ಪರಿವರ್ತನೆ ಮಾಡುವ ಹೊಣೆಗಾರಿಕೆ ನಿಮ್ಮ ಮೇಲಿದೆ. ಕಾರ್ಯಕರ್ತರು ಯಾವುದೇ ಕಾರಣಕ್ಕೂ ಎದೆಗುಂದಬಾರದು. ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಬೀಳಿಸಲೇಬೇಕು. ಪ್ರತಿ ತಾಲ್ಲೂಕಿನಿಂದಲೂ ಜನರನ್ನು ಕರೆತರುವ ಕೆಲಸ ಮಾಡಬೇಕೆಂದು ಕಾರ್ಯಕರ್ತರುಗಳಿಗೆ ಎ.ಮುರಳಿ ತಾಕೀತು ಮಾಡಿದರು.

ಬಿಜೆಪಿ. ರಾಜ್ಯ ಕಾರ್ಯದರ್ಶಿ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಮುನಿರಾಜು ಮಾತನಾಡಿ ವಾಲ್ಮೀಕಿ ಅಭಿವೃದ್ದಿ ನಿಗಮದ 187 ಕೋಟಿ ರೂ.ಗಳನ್ನು ದುರ್ಬಳಕೆ ಮಾಡಿಕೊಂಡಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ದ ಬಿಜೆಪಿ. ರಾಜ್ಯಾಧ್ಯಕ್ಷ ವಿಜಯೇಂದ್ರರವರ ನೇತೃತ್ವದಲ್ಲಿ ಹಮ್ಮಿಕೊಂಡಿರುವ ಪಾದಯಾತ್ರೆ ಯಶಸ್ವಿಯಾಗಬೇಕಾದರೆ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಮನವಿ ಮಾಡಿದರು.

ಉಚಿತ ಗ್ಯಾರೆಂಟಿಗಳನ್ನು ನೀಡಲು ಆಗದ ರಾಜ್ಯ ಸರ್ಕಾರ ಭ್ರಷ್ಠಾಚಾರದಲ್ಲಿ ಮುಳುಗಿದೆ. ಬಿಟ್ಟಿ ಭಾಗ್ಯಗಳನ್ನು ಘೋಷಿಸಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರವನ್ನು ಅಧಿಕಾರದಿಂದ ಕೆಳಗಿಳಿಸಬೇಕಿದೆ ಎಂದು ಹೇಳಿದರು.

ಬಿಜೆಪಿ. ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಜಿ.ಟಿ.ಸುರೇಶ್ ಸಿದ್ದಾಪುರ, ಸಂಪತ್‌ಕುಮಾರ್,ಬಾಳೆಕಾಯಿರಾಂದಾಸ್ ಇವರುಗಳು ವೇದಿಕೆಯಲ್ಲಿದ್ದರು. ಜಿಲ್ಲೆಯ ಎಲ್ಲಾ ತಾಲ್ಲೂಕಿನ ಮಂಡಲ ಪದಾಧಿಕಾರಿಗಳು ವಿಶೇಷ ಕಾರ್ಯಕಾರಿಣಿ ಸಭೆಯಲ್ಲಿ ಭಾಗವಹಿಸಿದ್ದರು.

## ಗ್ರಾ.ಪಂ.ಮಟ್ಟದಲ್ಲಿ ಚುನಾಯಿತ ಸದಸ್ಯರು ಸಾರ್ವಜನಿಕರ ಸೇವಕರಾಗಿ ಕಾರ್ಯನಿರ್ವಹಿಸಿ: ಶಾಸಕ ರಘುಮೂರ್ತಿ

» ಚಳ್ಳಕೆರೆ

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಚುನಾಯಿತ ಸದಸ್ಯರು ಸಾರ್ವಜನಿಕರ ಸೇವಕರಾಗಿ ಕಾರ್ಯನಿರ್ವಹಿಸಿ ಎಂದು ಕ್ಷೇತ್ರದ ಶಾಸಕ, ಕರ್ನಾಟಕ ರಾಜ್ಯ ಸಣ್ಣಕೈಗಾರಿಕೆ ಅಭಿವೃದ್ಧಿ ನಿಗಮ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಮಂಗಳವಾರ ಸಂಜೆ ಶಾಸಕರ ಭವನದಲ್ಲಿ ತಾಲ್ಲೂಕಿನ ನಗರಂಗೆರೆ ಗ್ರಾಮ ಪಂಚಾಯಿತಿ ನೂತನ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಸಿದ್ದಾಪುರದ ಮಂಗಳಮ್ಮರಂಗಸ್ವಾಮಿಯವರನ್ನು ಅಭಿನಂದಿಸಿ ಮಾತನಾಡಿದರು.

ನಗರಂಗೆರೆ ಗ್ರಾಮ ಪಂಚಾಯಿತಿ ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಅತಿಹೆಚ್ಚು ಪ್ರಾಮುಖ್ಯತೆ ಹೊಂದಿದೆ.




ಪುಟ 2


## ಬಾಲ್ಯವಿವಾಹ ನಿಷೇಧ ಕುರಿತು ಅರಿವು



ಚಿತ್ರದುರ್ಗ: ಚಿತ್ರದುರ್ಗ ತಾಲ್ಲೂಕಿನ ಭರಮಸಾಗರ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಚಿಕ್ಕಬೆನ್ನೂರು ಗ್ರಾಮ ಪಂಚಾಯಿತಿಯಲ್ಲಿ ಬುಧವಾರ ಮಿಷನ್ ಶಕ್ತಿ ಯೋಜನೆಯಡಿ ವಿಶೇಷ ಜಾಗೃತಿ ಅಭಿಯಾನದ ಅಂಗವಾಗಿ ಬಾಲ್ಯವಿವಾಹ ನಿಷೇಧ ಕುರಿತು ಜಾಗೃತಿ ಮೂಡಿಸಲಾಯಿತು. ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಡಿ.ಗೀತಾ ಅವರು, ಬಾಲ್ಯ ವಿವಾಹ ನಿಷೇಧ ಕಾಯ್ದೆಯ ಬಗ್ಗೆ ಹಾಗೂ ಬಾಲ್ಯ ವಿವಾಹ ನಡೆಸುವುದರಿಂದಾಗುವ ದುಷ್ಪರಿಣಾಮ, ಮಕ್ಕಳ ಮೇಲೆ ಆಗುತ್ತಿರುವ ಲೈಂಗಿಕ ದೌರ್ಜನ್ಯಗಳು, ಸುರಕ್ಷಿತ ಮತ್ತು ಅಸುರಕ್ಷಿತ ಸ್ಪರ್ಶಗಳ ಬಗ್ಗೆ ಮತ್ತು ಮಹಿಳಾ ಸಹಾಯವಾಣಿ 181 ಇವುಗಳ ಬಗ್ಗೆ ಮಹಿಳಾ ಕೇಂದ್ರಿತ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು.


ಪುಟ 3


**ಪ್ರಮುಖ ಸುದ್ದಿ**

### ಜಿಲ್ಲೆಯ ಡೆಂಗ್ಯೂ ಹಾಟ್‌ಸ್ಪಾಟ್ ಪ್ರದೇಶಗಳಿಗೆ ಸಾಂಕ್ರಾಮಿಕ ರೋಗಗಳ ವಿಭಾಗದ ಉಪನಿರ್ದೇಶಕಿ ಡಾ.ಎಂ.ಆರ್.ಪದ್ಮಾ ಭೇಟಿ
# ಡೆಂಗ್ಯೂ ನಿಯಂತ್ರಣಕ್ಕೆ ಅಗತ್ಯ ಮುನ್ನೆಚ್ಚರಿಕಾ ಕ್ರಮ ಜರುಗಿಸಿ

» ಚಿತ್ರದುರ್ಗ

ಜಿಲ್ಲೆಯ ಮೊಳಕಾಲ್ಮುರು, ಚಳ್ಳಕೆರೆ ಹಾಗೂ ಚಿತ್ರದುರ್ಗ ತಾಲ್ಲೂಕಿನ ವಿವಿಧೆಡೆ ಡೆಂಗ್ಯೂ ಹಾಟ್‌ಸ್ಪಾಟ್ ಎಂದು ಗುರುತಿಸಲಾದ ಗ್ರಾಮ, ನಗರ ಪ್ರದೇಶಗಳಿಗೆ ಮಂಗಳವಾರ ರಾಜ್ಯ ಸರ್ವೇಕ್ಷಣಾ ಘಟಕ ಹಾಗೂ ಸಾಂಕ್ರಾಮಿಕ ರೋಗಗಳ ವಿಭಾಗದ ಉಪನಿರ್ದೇಶಕಿ ಹಾಗೂ ಚಿತ್ರದುರ್ಗ ಜಿಲ್ಲಾ ನೋಡಲ್ ಅಧಿಕಾರಿ ಡಾ.ಎಂ.ಆರ್.ಪದ್ಮಾ ಅವರು ಡೆಂಗ್ಯೂ ನಿಯಂತ್ರಣ ಪರಿಶೀಲನೆ ಭೇಟಿ ನಡೆಸಿದರು.

ಡೆಂಗ್ಯೂ ನಿಯಂತ್ರಣಕ್ಕಾಗಿ ಜಿಲ್ಲೆಯಲ್ಲಿ ವಿಶೇಷವಾಗಿ ಸೊಳ್ಳೆಗಳ ತಾಣ ನಾಶ ಪಡಿಸಲು ನಡೆಸುತ್ತಿರುವ ಲಾರ್ವಾ ಸಮೀಕ್ಷೆಗಳ ಗುಣಮಟ್ಟ ಪರಿಶೀಲಿಸಿ, ಸೂಕ್ತ ಮಾರ್ಗದರ್ಶನ ನೀಡಿದರು.

ಲಾರ್ವಾ ಸಾಂದ್ರತೆ ಕಡಿಮೆ ಮಾಡಲು ಅಂತರ್ ಇಲಾಖೆಗಳ ಸಮನ್ವಯ ಪಡೆದು ಡೆಂಗ್ಯೂ ಪ್ರಕರಣ ನಿಯಂತ್ರಣಕ್ಕೆ ಅಗತ್ಯ ಮುನ್ನೆಚ್ಚರಿಕಾ ಕ್ರಮ ಜರುಗಿಸಿ ಎಂದು ಸೂಚನೆ ನೀಡಿದರು.




ನಂತರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿಗಳ ಸಭೆ ಕರೆದು ಪ್ರಗತಿ ಪರಿಶೀಲನೆ ನಡೆಸಿದರು. ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಮಾತನಾಡಿ, ಕ್ಷಯ ರೋಗ ನಿರ್ಮೂಲನೆಗೆ ಮರಣ ಪ್ರಮಾಣ ಶೇ.8ರಷ್ಟು ಇರುತ್ತದೆ. ಶೀಘ್ರ ರೋಗಪತ್ತೆ ಹಚ್ಚಿ ತ್ವರಿತ ಚಿಕಿತ್ಸೆಗೆ ಕ್ರಮ ವಹಿಸಿ. ಡೆಂಗ್ಯೂ ನಿಯಂತ್ರಣಕ್ಕೆ ಜಾಗೃತಿಯೇ ಮದ್ದು. ಗುಣಾತ್ಮಕ ಲಾರ್ವಾ ಸಮೀಕ್ಷೆ ನಡೆಸಿ, ಸೊಳ್ಳೆ ತಾಣ ನಾಶ ಮಾಡಿ ಎಂದರು.ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಅಭಿನವ್ ಮಾತನಾಡಿ, ಜಿಲ್ಲೆಯಲ್ಲಿ ಬಾಲಿಕಾ ಗರ್ಭಿಣಿಯರ ಸಂಖ್ಯೆ ಹೆಚ್ಚುತ್ತಿದ್ದು, ಈ ನಿಟ್ಟಿನಲ್ಲಿ ಎಮ್.ಎಲ್.ಸಿ ಪ್ರಕರಣ ದಾಖಲಿಸಿ ವರದಿ ಸಲ್ಲಿಸಿ, ಆಗಸ್ಟ್ 01 ರಿಂದ ಒಂದು ವಾರ ವಿಶ್ವ ಸ್ತನ್ಯಪಾನ ಸಪ್ತಾಹ ಆಚರಿಸಿ ತಾಯಿ ಮಕ್ಕಳ ಬಾಂದವ್ಯ ವೃದ್ಧಿಸಲು ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮಗಳನ್ನು ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ ಉಪಕೇಂದ್ರಗಳಲ್ಲಿ ಜಾಗೃತಿ ಮೂಡಿಸಿ, ಗರ್ಭಿಣಿ ಮಹಿಳೆಯರ ಶೀಘ್ರ ನೋಂದಾವಣೆಗಾಗಿ ಅರ್ಹ ದಂಪತಿಗಳ ಸಂಪರ್ಕ ಸಭೆ ಮಾಡಿ ಬೇಗನೇ ನೊಂದಾವಣಿಯ ಉಪಯೋಗ ತಿಳಿಸಿ ಎಂದರು.

ಸಭೆಯಲ್ಲಿ ರಾಜ್ಯ ಸರ್ವೇಕ್ಷಣಾ ಘಟಕದ ರೋಗಾಣು ತಜ್ಞ ಡಾ.ಬಿ.ಚಂದ್ರಶೇಖರ್, ಸಹಾಯಕ ಕೀಟ ಶಾಸ್ತ್ರಜ್ಞೆ ಸುನಂದ, ಜಿಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳಾದ ಡಾ.ರೇಖಾ, ಡಾ.ಕಾಶಿ ತಾಲ್ಲೂಕು ಆರೋಗ್ಯಾಧಿಕಾರಿಗಳಾದ ಡಾ.ರಾಘವೇಂದ್ರ ಪ್ರಸಾದ್, ಡಾ.ವೆಂಕಟೇಶ್, ಡಾ.ಮಧುಕುಮಾರ್, ತಾಲ್ಲೂಕು ವ್ಯವಸ್ಥಾಪಕರಾದ ಮಹಮ್ಮದ್ ಅಲಿ, ಸಂತೋಷ, ಹಬೀಬ್, ಜಿಲ್ಲಾ ವ್ಯವಸ್ಥಾಪಕರಾದ ಪ್ರಫುಲ್ಲಾ, ಮೇಟಿ, ಕುಮಾರ್, ಅರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಇದ್ದರು.

## ಫಾಸ್ಟ್ ನ್ಯೂಸ್

### ಪರೀಕ್ಷಾ ಪೂರ್ವ ತರಬೇತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

2024–25ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಐಎಎಸ್, ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡಲು ಅಲ್ಪಸಂಖ್ಯಾತರ ಸಮುದಾಯದವರಿಗೆ ಸೇವಾಸಿಂಧು ತಂತ್ರಾಂಶದ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ಆರ್ಥಿಕ ಹೊರೆ ತಪ್ಪಿಸಲು ಅಭ್ಯರ್ಥಿಗಳ ಸುರಕ್ಷತಾ ಹಿತದೃಷ್ಠಿಯಿಂದ ಕಲಿಕಾ ಪೂರಕ ವಾತಾವರಣ ಒದಗಿಸಲು ಉತ್ತಮ ಫಲಿತಾಂಶ ಮತ್ತು ಸರ್ಕಾರಿ ಉದ್ಯೋಗ ಪಡೆದುಕೊಳ್ಳಲು ಅನುಕೂಲವಾಗುವಂತೆ ಬೆಂಗಳೂರು ನಗರದಲ್ಲಿ ನಿರ್ಮಿಸಿರುವ ಹಜ್ ಭವನದಲ್ಲಿ ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಗೆ 10 ತಿಂಗಳ ವಸತಿ ಸಹಿತ ಐಎಎಸ್, ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವ ತರಬೇತಿ ನೀಡಲು ಅರ್ಜಿಗಳನ್ನು ಆನ್‌ಲೈನ್ ಸೇವಾಸಿಂಧು ತಂತ್ರಾಂಶದ ಮೂಲಕ ಆಹ್ವಾನಿಸಲಾಗಿದೆ. ಸೇವಾಸಿಂಧು ವೆಬ್‌ಸೈಟ್ http://sevasindhu.karnataka.gov.in/sevasindhu/DepartmentServices ಈ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

### ಪಾಲಿಕೆ ಆಶ್ರಯ ಸಮಿತಿ ಸದಸ್ಯ ನಿರ್ದೇಶಕರಾಗಿ ಕಣ್ಣಾಳ್ ಅಂಜಿನಪ್ಪ

» ದಾವಣಗೆರೆ



ದಾವಣಗೆರೆ ಉತ್ತರ ವಿಧಾನಸಭಾ ಕ್ಷೇತ್ರದ ನಗರ ಆಶ್ರಯ ಸಮಿತಿ ಸದಸ್ಯ (ನಿರ್ದೇಶಕ)ರನ್ನಾಗಿ ಶಾಮನೂರು ಆಂಜನೇಯ ಬಡಾವಣೆಯ ಕಣ್ಣಾಳ್ ಆಂಜಿನಪ್ಪ ಅವರನ್ನು ನೇಮಿಸಿ ವಸತಿ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಆದೇಶಿಸಿದ್ದಾರೆ. ಕಾಂಗ್ರೆಸ್ ಪಕ್ಷದ ಹಾಗೂ ದಲಿತ ಸಮುದಾಯದ ಮುಖಂಡರು ಆಗಿರುವ ಕಣ್ಣಾಳ ಆಂಜಿನಪ್ಪ ಅವರು ಅಭಿಮಾನಿ ಯುವಶಕ್ತಿ ಬಳಗದ ಸಂಸ್ಥಾಪಕ ರಾಜ್ಯಾಧ್ಯಕ್ಷರಾಗಿದ್ದಾರೆ.

### ಆ.4ರಂದು ಪತ್ರಿಕಾ ದಿನಾಚರಣೆ

» ಚಳ್ಳಕೆರೆ

ಕರ್ನಾಟಕ ಮಾಧ್ಯಮ ಮಹಾಒಕ್ಕೂಟ ಚಳ್ಳಕೆರೆ ಶಾಖೆವತಿಯಿಂದ ಆ.4ರ ಭಾನುವಾರ ಬೆಳಗ್ಗೆ 11.30ಕ್ಕೆ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಪತ್ರಿಕಾದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದಾಗಿ ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಡಿ.ನಿಂಗಪ್ಪ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ, ಸಂಸದ ಗೋವಿಂದ ಎಂ.ಕಾರಜೋಳ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು, ಶಾಸಕ ಟಿ.ರಘುಮೂರ್ತಿ ನೂತನ ಶಾಖೆಯನ್ನು ಉದ್ಘಾಟಿಸುವರು. ಜಿಲ್ಲಾಧ್ಯಕ್ಷ ಕರುನಾಡಜೀಯಾವುಲ್ಲಾ, ಕಥೆಗಾರ ಮೊದೂರು ತೇಜ, ಮಾಜಿ ಸಚಿವ ಎಚ್. ಆಂಜನೇಯ, ಎಂಎಲ್‌ಸಿ ಕೆ.ಎಸ್.ನವೀನ್, ಶಾಸಕ ಕೆ.ಸಿ.ವೀರೇಂದ್ರ, ಹಿರಿಯ ಸಾಹಿತಿ ತಿಪ್ಪಣ್ಣಮರಿಕುಂಟೆ, ತಹಶೀಲ್ದಾರ್ ರೇಹಾನ್‌ಪಾಷ, ಡಿವೈಎಸ್ಪಿ ಟಿ.ಬಿ.ರಾಜಣ್ಣ, ಸಂಸ್ಥಾಪಕ ಅಧ್ಯಕ್ಷ ಕೆ.ಶಿವಕುಮಾರ್, ರಾಜ್ಯ ಪ್ರಧಾನ ಕಾರ್ಯದರ್ಶಿ ಡಿ.ಈಶ್ವರಪ್ಪ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಒಕ್ಕೂಟ ಅಧ್ಯಕ್ಷ ಡಿ.ಗಂಗಾಧರ ವಹಿಸುವರು.

### ಗ್ರಾ.ಪಂ ಸದಸ್ಯರು ಸಾರ್ವಜನಿಕರ ಸೇವಕರಾಗಿ ಕಾರ್ಯ ನಿರ್ವಹಿಸಿ: ಶಾಸಕ

» ಮೊದಲ ಪುಟದಿಂದ

ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸ್ಥಾನ ಗ್ರಾಮೀಣ ಭಾಗದಲ್ಲಿ ಹೆಚ್ಚು ಗೌರವವಿರುವ ಹುದ್ದೆಯಾಗಿದೆ. ಮಂಗಳಮ್ಮರಂಗಸ್ವಾಮಿ ತಮ್ಮ ಅವಧಿಯಲ್ಲಿ ಉತ್ತಮ ಸೇವೆ ನಿರ್ವಹಿಸಿ ಖ್ಯಾತಿಯಾಗಲಿ ಎಂದು ಶುಭಹಾರೈಸಿದರು. ಜನರು ನೀಡುವ ಅಧಿಕಾರವನ್ನು ಜನರ ಒಳಿತಿಗಾಗಿಯೇ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುವ ರಾಜಕಾರಣಿಗಳನ್ನು ಜನರು ಸದಾಗೌರವಿಸುತ್ತಾರೆ. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅಭಿವೃದ್ಧಿಗಿಂತ ಮುಖ್ಯವಾಗಿ ಸ್ಥಳೀಯ ಸಂಸ್ಥೆಗೆ ಆದ್ಯತೆ ನೀಡಬೇಕಿದೆ. ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರದ ನಿಬಂಧನೆಗಳನ್ನು ಪಾಲಿಸಬೇಕು. ಪ್ರಾಮಾಣಿಕ ಕಾರ್ಯದಿಂದ ಮಾತ್ರ ಜನರ ವಿಶ್ವಾಸ ನಮ್ಮ ಮೇಲೆ ಸದಾ ಇರುತ್ತದೆ ಎಂದರು. ಗ್ರಾಮ ಪಂಚಾಯಿತಿ ವತಿಯಿಂದ ಶಾಸಕ ಟಿ.ರಘುಮೂರ್ತಿಯವರನ್ನು ಅಭಿನಂದಿಸಲಾಯಿತು. ಗ್ರಾಮ ಪಂಚಾಯಿತಿ ಅಭಿವೃದ್ಧಿಗೆ ಹೆಚ್ಚು ಅನುದಾನ ನೀಡುವಂತೆ ಸದಸ್ಯರು ಮನವಿ ಮಾಡಿದರು. ಮಾಜಿ ಅಧ್ಯಕ್ಷ ಎಂ.ಕುಮಾರಸ್ವಾಮಿ, ಸದಸ್ಯರಾದ ಎನ್.ಮಂಜುನಾಥ, ಅಂಗಡಿರಮೇಶ್, ಎಂ.ಹಿದಾಯಿತ್‌ವುಲ್ಲಾ, ರಂಗಸ್ವಾಮಿ, ಷಣ್ಮುಖಪ್ಪ ಮುಂತಾದವರು ಉಪಸ್ಥಿತರಿದ್ದರು.

---

### ಜಿಲ್ಲಾಧಿಕಾರಿ, ಶಾಸಕರು, ಸಿಇಓ ರಿಂದ ಜಂಟಿ ಸಮೀಕ್ಷೆ

# ತುಂಗಭದ್ರಾ ನೀರು 1,44,468 ಕ್ಯೂಸೆಕ್ಸ್‌ಗೆ ಏರಿಕೆ

## ಅಪಾಯ ಮಟ್ಟ ತಲುಪಿದ ನದಿ ಪ್ರವಾಹ, ನದಿಪಾತ್ರದಲ್ಲಿನ ಜನರು ಎಚ್ಚರದಿಂದಿರಲು ಸೂಚನೆ

» ದಾವಣಗೆರೆ

ಮಲೆನಾಡಿನ ಭಾಗದಲ್ಲಿ ಸಾಕಷ್ಟು ಮಳೆಯಾಗುತ್ತಿರುವುದರಿಂದ ಭದ್ರಾ ಜಲಾಶಯ ಭರ್ತಿಯಾಗಿದೆ ಮತ್ತು ತುಂಗಾ ನದಿಯಿಂದಲೂ ಎಲ್ಲಾ ಕ್ರೆಸ್ ಗೇಟ್‌ಗಳ ಮೂಲಕ ನೀರನ್ನು ನದಿಗೆ ಹೊರಬಿಡಲಾಗುತ್ತಿದ್ದು ತುಂಗಭದ್ರಾ ನದಿಯಲ್ಲಿ 1,44,468 ಕ್ಯೂಸೆಕ್ಸ್‌ಗೆ ಏರಿಕೆಯಾಗಿದ್ದು ಇದು ಅಪಾಯ ಮಟ್ಟವನ್ನು ತಲುಪಿರುವುದರಿಂದ ನದಿಪಾತ್ರದಲ್ಲಿನ ಜನರು ಎಚ್ಚರಿಕೆ ವಹಿಸಬೇಕೆಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಜನರಿಗೆ ಮನವಿ ಮಾಡಿದ್ದಾರೆ.

ಅವರು ಬುಧವಾರ ಹೊನ್ನಾಳಿಯ ಸಾಸ್ವೇಹಳ್ಳಿ, ಬಾಲರಾಜ್‌ಘಾಟ್, ಬಂಬೂ ಬಜಾರ್ ಪ್ರದೇಶಗಳಿಗೆ ಶಾಸಕರಾದ ಡಿ.ಜಿ.ಶಾಂತನಗೌಡ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ಹಾಗೂ ವಿವಿಧ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪ್ರವಾಹದಿಂದ ತೊಂದರೆಯುಂಟಾಗುವ ಪ್ರದೇಶಗಳ ವೀಕ್ಷಣೆ ಮಾಡಿದರು.

ತುಂಗಾ ನದಿಯಿಂದ 82053 ಮತ್ತು ಭದ್ರಾದಿಂದ 62415 ಕ್ಯೂಸೆಕ್ಸ್ ನೀರು ಬರುತ್ತಿದ್ದು ತುಂಗಭದ್ರಾ ನದಿಯಲ್ಲಿ ಒಂದೂವರೆ ಲಕ್ಷ ಕ್ಯೂಸೆಕ್ಸ್‌ವರೆಗೆ ನದಿಯಲ್ಲಿ ನೀರು ಹರಿಯುತ್ತಿದೆ. ಇದರಿಂದ ಹೊನ್ನಾಳಿ ಬಾಲರಾಜ್‌ಘಾಟ್, ಬಂಬೂ ಬಜಾರ್ ಪ್ರದೇಶದ ನದಿಪಾತ್ರದಲ್ಲಿನ ಮನೆಗಳಿಗೆ ನೀರು ಬರಲಿದೆ. ಇದಕ್ಕಾಗಿ ಅಂಬೇಡ್ಕರ್ ಭವನ ಇಲ್ಲಿ 20 ಕುಟುಂಬಗಳ 93 ಜನರು, ಗುರುಭವನದಲ್ಲಿ 6 ಕುಟುಂಬದ 27 ಜನರಿಗೆ ಕಾಳಜಿ ಕೇಂದ್ರ ತೆರೆದು ಪ್ರವಾಹಪೀಡಿತ ಪ್ರದೇಶದಿಂದ ಇಲ್ಲಿಗೆ ಸ್ಥಳಾಂತರಿಸಲಾಗಿದೆ. ಮತ್ತು





ಹರಿಹರದಲ್ಲಿನ ಗಂಗಾನಗರದಲ್ಲಿನ ಪ್ರವಾಹ ಉಂಟಾಗಬಹುದೆಂದು ಎಪಿಎಂಸಿಯಲ್ಲಿ ಕಾಳಜಿ ಕೇಂದ್ರ ತೆರೆಯಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ನದಿಗೆ ಇಳಿಯದಂತೆ ಎಚ್ಚರಿಕೆ, ನಿಷೇಧ, ಸನ್ನದ್ಧವಾದ ಎಸ್‌ಡಿಆರ್‌ಎಫ್, ಅಗ್ನಿಶಾಮಕ ಪಡೆ; ತುಂಗಭದ್ರಾ ನದಿ ಅಪಾಯ ಮಟ್ಟದಲ್ಲಿ ಹರಿಯುತ್ತಿರುವುದರಿಂದ ಎಸ್.ಡಿ.ಆರ್. ಎಫ್ ಪಡೆ ಮತ್ತು ಅಗ್ನಿ ಶಾಮಕ ಇಲಾಖೆ ತಂಡವು ರಕ್ಷಣಾ ಪರಿಕರಗಳೊಂದಿಗೆ ಸನ್ನದ್ಧವಾಗಿಡಲಾಗಿದೆ. ಮತ್ತು ನದಿಪಾತ್ರದಲ್ಲಿ ಜನ, ಜಾನುವಾರುಗಳು ನದಿಗೆ ಇಳಿಯದಂತೆ ಅಪಾಯಕಾರಿ ಸ್ಥಳಗಳಲ್ಲಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ. ಮತ್ತು ಗ್ರಾಮ ಮಟ್ಟದಲ್ಲಿನ ಟಾಸ್ಕ್ ಪೋರ್ಸ್ ಸಮಿತಿ ರಚನೆ ಮಾಡಿ ನದಿಪಾತ್ರದಲ್ಲಿನ ಎಲ್ಲಾ ಗ್ರಾಮಗಳಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮಾಡಳಿತ ಅಧಿಕಾರಿಗಳು ಸೇರಿದಂತೆ ತಹಶೀಲ್ದಾರರು ಕಟ್ಟೆಚ್ಚರ ವಹಿಸಲು ಸೂಚನೆ ನೀಡಿ ನದಿಗೆ ಇಳಿಯದಂತೆ ಡಂಗೂರ ಹಾಗೂ ಮೈಕ್ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ.

ಪಥ ಬದಲಿಸಲು ಸೂಚನೆ; ನದಿ ಪ್ರವಾಹದಿಂದ ಕೆಲವು ರಸ್ತೆ ಸಂಪರ್ಕಗಳು ಕಡಿತವಾಗಿದ್ದು ಇಲ್ಲಿ ಸಂಚಾರ ಸಂಪೂರ್ಣವಾಗಿ ನಿಷೇಧಿಸಲಾಗಿದೆ. ನಿಷೇಧಿತ ಮಾರ್ಗದ ಬದಲಾಗಿ ಪರ್ಯಾಯ ಮಾರ್ಗದಲ್ಲಿ ಸಂಚರಿಸಲು ಸೂಚಿಸಲಾಗಿದೆ. ಹೊನ್ನಾಳಿ ತಾಲ್ಲೂಕಿನ ವಿಜಯಪುರ–ಕೋಟೆಮಲ್ಲೂರು ರಸ್ತೆ ಬದಲಾಗಿ ಹಾರಕೆರೆ ರಸ್ತೆ, ಕಮ್ಮಾರಗಟ್ಟೆ–ಬೆನಕನಹಳ್ಳಿ ಬದಲಾಗಿ ಕೈಮರ ಕ್ಯಾಂಪ್ ರಸ್ತೆ, ಹರಿಹರ ತಾ; ನಂದಿಗುಡಿ–ಪತ್ಯಾಪುರ–ಉಕ್ಕಡಗಾತ್ರಿ ರಸ್ತೆ ಸೇತುವೆ ಮುಳುಗಡೆಯಾಗಿದ್ದು ಇದರ ಬದಲಾಗಿ ನಂದಿಗುಡಿ–ತುಮ್ಮಿನಕಟ್ಟೆ ರಸ್ತೆ ಬಳಕೆಗೆ ಸೂಚಿಸಲಾಗಿದೆ.

ಹೊನ್ನಾಳಿ ಬೇಸ್ ಸ್ಟೇಷನ್; ಹೊನ್ನಾಳಿಯಲ್ಲಿ ತುಂಗಭದ್ರಾ ನದಿಯ ನೀರಿನ ಮಟ್ಟ ಅಳತೆಗೆ ಕೇಂದ್ರ ವಾಟರ್ ಬೋರ್ಡ್‌ನ ಬೇಸ್ ಸ್ಟೇಷನ್ ಇದ್ದು ಇಲ್ಲಿ ಜುಲೈ 31 ರ ಸಂಜೆ 6 ಗಂಟೆ ವೇಳೆಗೆ 12.06 ಮೀಟರ್ ಪ್ರಮಾಣದಲ್ಲಿ ನೀರು ಹರಿಯುತ್ತಿದೆ, ಇದು ಅಪಾಯ ಮಟ್ಟವಾಗಿದೆ. ಈ ಸ್ಟೇಷನ್‌ನಲ್ಲಿ 10.85 ಮೀಟರ್‌ಹರಿವುದಾಖಲಾದರೆಅಪಾಯದ ಮಟ್ಟ ಎಂದೇ ಪರಿಗಣಿಸಲಾಗುತ್ತದೆ. 12.57 ಮೀಟರ್ ದಾಖಲಾದರೆ ಪ್ರವಾಗ ಉಂಟಾಗಿ ಹಾನಿಯ ಮಟ್ಟವೆಂದು ಪರಿಗಣಿಸಲಾಗುತ್ತದೆ. ಪ್ರತಿ ಗಂಟೆಗೆ ಇಲ್ಲಿನ ದಾಖಲೆಯಲ್ಲಿ ಪಡೆದು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗುತ್ತದೆ.

ತುರ್ತು ಸಂದರ್ಭದಲ್ಲಿ ಸಹಾಯಕ್ಕಾಗಿ ಸಹಾಯವಾಣಿ ಸ್ಥಾಪನೆ; ಜಿಲ್ಲಾಧಿಕಾರಿಗಳ ಕಚೇರಿ 08192–234034, 1077, ಎಸ್‌ಡಿಆರ್‌ಎಫ್ ಘಟಕ, ದೇವರಬೆಳೆಕೆರೆ 7411308591, ದಾವಣಗೆರೆ ಅಗ್ನಿಶಾಮಕ ಇಲಾಖೆ 08192–258101, 112, ದಾವಣಗೆರೆ ಮಹಾನಗರ ಪಾಲಿಕೆ 08192–234444, 8277234444, ದಾವಣಗೆರೆ ತಾ; ಕಚೇರಿ 9036396101, ಹರಿಹರ 08192–272959, ಜಗಳೂರು 08196–227242, ಹೊನ್ನಾಳಿ 08188–252108, ನ್ಯಾಮತಿ 8073951245, ಚನ್ನಗಿರಿ 7892481962 ದೂರವಾಣಿ, ಮೊಬೈಲ್ ಸಂಖ್ಯೆಗೆ ಕರೆ ಮಾಡಲು ಕೋರಲಾಗಿದೆ.

---

### ಬಚ್ಚಬೋರಯ್ಯನಹಟ್ಟಿಯಲ್ಲಿ ಪ್ರತಿಭಾ ಕಾರಂಜಿ

# ಮಕ್ಕಳು ಸಮಾಜ ಮುಖಿಯಾಗಿ ಬೆಳೆಯಲು ಪ್ರತಿಭಾ ಕಾರಂಜಿ ಸಹಕಾರಿ

» ಚಿತ್ರದುರ್ಗ/ಬಚ್ಚಬೋರಯ್ಯನಹಟ್ಟಿ

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಬಚ್ಚಬೋರನಹಟ್ಟಿಯಲ್ಲಿ ಸೋಮವಾರ ಗೋನೂರು ಕ್ಲಸ್ಟರ್ ಹಂತದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ಶಾಲಾ ಶಿಕ್ಷಣಇಲಾಖೆ, ಕ್ಷೇತ್ರ ಸಂಪನ್ಮೂಲ ಅಧಿಕಾರಿಳವರ ಕಛೇರಿ ಚಿತ್ರದುರ್ಗ ಹಾಗೂ ಗೋನೂರು ಗ್ರಾಮ ಪಂಚಾಯಿತಿಯ ಸಹಕಾರದೊಂದಿಗೆ ನಡೆಸಲಾದ ಈ ಕಾರ್ಯಕ್ರಮವನ್ನು ಶಿಕ್ಷಣ ಸಂಯೋಜಕರಾದ ಶ್ರೀಯುತ ರಮೇಶ್ ರೆಡ್ಡಿ ಉದ್ಘಾಟಿಸಿ ಪಠ್ಯದ ಜೊತೆಗೆ ಮಕ್ಕಳಲ್ಲಿ ಹುದುಗಿರುವ ಪ್ರತಿಭೆಗಳನ್ನು ಹೊರತರಲು ಇದೊಂದು ಸೂಕ್ತ ವೇದಿಕೆ ಎಂದು ತಿಳಿಸಿದರು. ಬಿ.ಆರ್.ಪಿ ಯವರಾದ ಶ್ರೀಮತಿ ವಿದ್ಯಾರವರು ಮಗು ಶಾಲೆಯಲ್ಲಿ ಕಲಿತ ಪಠ್ಯ ವಿಷಯಗಳನ್ನು ಅಭಿವ್ಯಕ್ತಿಗೊಳಿಸಿಕೊಂಡು ಸಮಾಜ ಮುಖಿಯಾಗಿ ಬೆಳೆಯಲು ಸಹಕಾರಿ ಎಂದು ತಿಳಿಸಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಶ್ರೀಮತಿ ನಿರ್ಮಲಾರವರು ಶಾಲೆಗಳಲ್ಲಿ



ಮಕ್ಕಳ ಪ್ರತಿಭೆಗಳನ್ನು ಹೊರತರುವ ಪ್ರತಿಭಾ ಕಾರಂಜಿಯಂತಹ ಕಾರ್ಯಕ್ರಮಗಳು ಹೆಚ್ಚು ಹೆಚ್ಚು ನಡೆಯಬೇಕು ಎಂಬ ತಿಳಿಸಿದರು. ಸಿ.ಆರ್.ಪಿ. ಶ್ರೀಯುತ ರಮೇಶ್ ರವರು ಪ್ರಾಸ್ತಾವಿಕವಾಗಿ ಮಾತನಾಡಿ ಕಾರ್ಯಕ್ರಮಕ್ಕೆ ಶುಭಕೋರಿದರು. ಎಸ್.ಟಿ.ಎಂ.ಸಿ. ಉಪಾಧ್ಯಕ್ಷರಾದ ಶ್ರೀಮತಿ ಗಾಯತ್ರಿ, ಎಸ್.ಟಿ.ಎಂ.ಸಿ ಸದಸ್ಯರಾದ ಶ್ರೀಮತಿ ಮಂಜುಳಾ, ಶ್ರೀಮತಿ ತಾಯಮ್ಮ, ಗ್ರಾಮದ ಮುಖಂಡರು ಮತ್ತು ಕ್ಲಸ್ಟರ್ ವ್ಯಾಪ್ತಿಯ ಶಾಲಾ ಮುಖ್ಯ ಶಿಕ್ಷಕರು ಸಹ ಶಿಕ್ಷಕರುಗಳು ಹಾಗೂ ಶಾಲಾ ಮಕ್ಕಳು ಭಾಗವಹಿಸಿದ್ದರು. ಬಚ್ಚಬೋರನಹಟ್ಟಿ ಶಾಲೆಯ ಮುಖ್ಯ ಶಿಕ್ಷಕರಾದ ಜಿ. ರಂಗಸ್ವಾಮಿ ಸ್ವಾಗತಿಸಿ, ಸಹ ಶಿಕ್ಷಕಿಯರಾದ ಪುಷ್ಪ ರವರು ನಿರೂಪಿಸಿ ಮುಕ್ತಬಾಯಿಯವರು ವಂದಿಸಿದರು. ಮಂಗಳಗೌರಮ್ಮ ಹಾಗೂ ಶ್ಯಾಮಲಾ ರವರು ಉಪಸ್ಥಿತರಿದ್ದರು.

---

### ವಿಜ್ಞಾನದ ವಿದ್ಯಾರ್ಥಿಗಳು ಸದುಪಯೋಗ ಪಡೆದುಕೊಳ್ಳಿ: ವೀರಣ್ಣ



» ಚಳ್ಳಕೆರೆ

ಕಳೆದ ಹಲವಾರು ವರ್ಷಗಳಿಂದ ಕುವೈತ್ ಕನ್ನಡ ಕೂಟದ ಕ್ಷೇಮಾಭ್ಯುದಯ ಸಂಘ ಶಾಲಾ ದತ್ತು ಯೋಜನೆಯಡಿ ವಿಜ್ಞಾನ ಕಿಟ್ ವಿತರಿಸುವ ಮೂಲಕ ವಿದ್ಯಾರ್ಥಿಗಳಿಗೆ ಉತ್ತಮ ಸೇವೆ ಸಲ್ಲಿಸುತ್ತಾ ಬಂದಿದೆ. ಪ್ರಸ್ತುತ ಇಂದಿನ ಸ್ಥಿತಿಯಲ್ಲಿ ಇಡೀ ಶಿಕ್ಷಣ ವಿಜ್ಞಾನದ ವಿಷಯದ ಮೇಲೆ ಅವಂಲಭಿತವಾಗಿದೆ ಎಂದು ಎಚ್‌ಟಿಟಿ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ವೀರಣ್ಣ ತಿಳಿಸಿದ್ದಾರೆ.

ಅವರು, ಬುಧವಾರ ಶಾಲಾ ಆವರಣದಲ್ಲಿ ಕುವೈತ್ ಕನ್ನಡ ಕೂಟದ ಕ್ಷೇಮಾಭ್ಯುದಯ ಸಂಘದ ವತಿಯಿಂದ ನೀಡಲಾದ ವಿಜ್ಞಾನ ಕಿಟ್‌ಗಳ ವಿತರಣಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಸರ್ಕಾರ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಹಲವಾರು ಯೋಜನೆಗಳಲ್ಲಿ ನೆರವು ನೀಡುತ್ತಿದ್ದರೂ ಖಾಸಗಿ ಸಹಭಾಗಿತ್ವವದಲ್ಲಿ ಇಂತಹ ಕೊಡಿಗೆಗಳು ಇನ್ನೂ ಹೆಚ್ಚಿನ ರೀತಿಯಲ್ಲಿ ಜ್ಞಾನಾರ್ಜನೆಗೆ ಸಹಕಾರಿಯಾಗಲಿವೆ ಎಂದರು. ಸಂಘದ ಅಧ್ಯಕ್ಷ ವಾಸುಕಿ ಮಾತನಾಡಿ, ಪ್ರಸ್ತುತ ಈ ಯೋಜನೆಯಡಿ ತಾಲ್ಲೂಕಿನ 30 ಶಾಲೆಗಳಿಗೆ ವಿಜ್ಞಾನ ಕಿಟ್ ವಿತರಣೆ ಮಾಡಲಾಗಿದೆ. 6ರಿಂದ10 ತರಗತಿಯವರೆಗೂ ವಿದ್ಯಾರ್ಥಿಗಳಿಗೆ ಈ ಕಿಟ್ ಮೂಲಕ ಬೋಧನೆ ಮಾಡಬಹುದಾಗಿದೆ.

---

## ಪ್ರಮುಖ ಸುದ್ದಿ

### ಪ್ರಧಾನಮಂತ್ರಿ ಪೋಷಣ್ ಶಕ್ತಿ ನಿರ್ಮಾಣ್ ಸಾಮಾಜಿಕ ಪರಿಶೋಧನೆಯ ಪೋಷಕರ ಸಭೆಯಲ್ಲಿ ಹೇಳಿಕೆ

# ಮಕ್ಕಳ ಉಜ್ವಲ ಭವಿಷ್ಯಕ್ಕೆ ಪೂರಕ ಶಿಕ್ಷಣ ಅವಶ್ಯ

» ನಾಯಕನಹಟ್ಟಿ

ಮಕ್ಕಳಿಗೆ ಬಾಲ್ಯವಸ್ಥೆಯಿಂದಲೇ ಉತ್ತಮ ವಾತಾವರಣ ಹಾಗೂ ವೇದಿಕೆ ಒದಗಿಸುವುದರ ಮೂಲಕ ಉಜ್ವಲ ಭವಿಷ್ಯ ನೀಡುವುದು ಪೋಷಕರ ಕರ್ತವ್ಯವಾಗಿದೆ ಎಂದು ತಾಲೂಕು ಪಂಚಾಯತಿ ಸಾಮಾಜಿಕ ಪರಿಶೋಧನಾ ಸಮಿತಿ ಕಾರ್ಯಕ್ರಮ ವ್ಯವಸ್ಥಾಪಕ ಆರ್.ಗಿರೀಶ್ ಕುಮಾರ್ ಹೇಳಿದರು.

ಪಟ್ಟಣದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬುಧವಾರ ಹಮ್ಮಿಕೊಂಡಿದ್ದ ಪ್ರಧಾನಮಂತ್ರಿ ಪೋಷಣ್ ಶಕ್ತಿ ನಿರ್ಮಾಣ್ ಸಾಮಾಜಿಕ ಪರಿಶೋಧನೆಯ ಪೋಷಕರ ಸಭೆಯಲ್ಲಿ ಮಾತನಾಡಿದರು.

ಮಕ್ಕಳ ಶೈಕ್ಷಣಿಕ ಪ್ರಗತಿಯಲ್ಲಿ ಶಿಕ್ಷಕರ ಜತೆಗೆ ಪೋಷಕರ ಪಾತ್ರಅತ್ಯಂತ ಮಹತ್ವತೆಯಿಂದ ಕೂಡಿದೆ. ಶಿಕ್ಷಣದಿಂದ ಯಾವ ಮಕ್ಕಳು ವಂಚಿತವಾಗಬಾರದು ಎನ್ನುವುದನ್ನು ಮನಗಂಡು ಸರ್ಕಾರವು ಮಧ್ಯಾಹ್ನದ ಬಿಸಿಯೂಟ, ಕ್ಷೀರಭಾಗ್ಯ, ಶೂಭಾಗ್ಯ ಸೇರಿದಂತೆ ಹಲವಾರು ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತಂದಿವೆ. ಈ ಹಿಂದೆ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಪ್ರೋತ್ಸಾಹ ದೊರೆಯುತ್ತಿರಲಿಲ್ಲ. ಪ್ರಸ್ತುತರಾಜ್ಯ ಮತ್ತು ಕೇಂದ್ರ ಸರ್ಕಾರ ಪ್ರೋತ್ಸಾಹ ನೀಡುತ್ತಿವೆ. ಎಲ್ಲರ ಆಶಯ ಜತೆಗೆ ಪೋಷಕರ ಬಯಕೆಯಂತೆ ವಿದ್ಯಾರ್ಥಿಗಳು ತಮಗೆ ಸಿಗುತ್ತಿರುವ ಸವಲತ್ತುಗಳನ್ನು ಸಮರ್ಪಕವಾಗಿ ಬಳಸಿಕೊಂಡು ಪ್ರಜ್ಞಾವಂತರಾಗಬೇಕಿದೆ ಎಂದರು. ಶಿಕ್ಷಕರು ಶಾಲೆಯಲ್ಲಿ ಮಾಡಿದ ಪ್ರಯತ್ನಗಳಿಗೆ ಪೂರಕವಾಗಿ ಪೋಷಕರುತಮ್ಮ ಮನೆಯಲ್ಲಿ ಮಕ್ಕಳ ಕಲಿಕೆಯಲ್ಲಿ ಭಯದ ವಾತಾವರಣಉಂಟು ಮಾಡದೇ ಸಕ್ರಿಯವಾಗಿ ಭಾಗವಹಿಸಬೇಕು. ಮಕ್ಕಳೆದುರು ದುಶ್ಚಟಗಳಲ್ಲಿ ಪಾಲ್ಗೊಳ್ಳುವುದು ಅತ್ಯಂತ ಅಪಾಯಕಾರಿ ಇಂತಹ ಚಟುವಟಿಕೆಗಳಿಂದ ದೂರವಿದ್ದು, ಸದಾ ಮಕ್ಕಳಲ್ಲಿ ಓದಿನ ಆಸಕ್ತಿ ಕಡಿಮೆ ಆಗದಂತೆ ನೋಡಿಕೊಳ್ಳಬೇಕು ಎಂದುಸಲಹೆ ನೀಡಿದರು.



ಬಡ್ತಿ ಹಿರಿಯ ಮುಖ್ಯ ಶಿಕ್ಷಕಿ ಎನ್. ಇಂದಿರಮ್ಮ ಮಾತನಾಡಿ, ಮಕ್ಕಳ ಸರ್ವತೋಮುಖ ಬೆಳವಣಿಗೆಯಲ್ಲಿ ಶಿಕ್ಷಕರ ಜತೆಗೆ ಪೋಷಕರ ಸಹಕಾರವೂ ಮುಖ್ಯವಾಗಿದೆ. ಮಗುವಿನ ಸಾಮರ್ಥ್ಯ ಮತ್ತು ಸವಾಲುಗಳನ್ನು ಶಿಕ್ಷಕರು ಯಾವ ರೀತಿಯಾಗಿ ಪರಿಗಣಿಸಿರುವರು ಎಂಬುದನ್ನು ಪೋಷಕರು ಅರಿಯಬೇಕಿದೆ. ಶಿಕ್ಷಕರೊಂದಿಗೆ ಆಗಾಗ್ಗೆ ಶಾಲೆಗೆ ಭೇಟಿ ನೀಡಿ ಸಮಾಲೋಚನೆ ಮಾಡುವುದರಿಂದ ಮಗುವಿನ ಯಶಸ್ಸು ಮತ್ತು ವೈಫಲ್ಯಗಳಿಗೆ ಉತ್ತರ ದೊರೆಯಲಿದೆ. ಪ್ರಮುಖವಾಗಿ ಮೊಬೈಲ್ ಬಳಕೆಯಿಂದ ಮಕ್ಕಳನ್ನು ದೂರವಿಡಿ ಎಂದು ಮನವಿ ಮಾಡಿದರು.

ಸಂವಿಧಾನದ ಆಶಯದಂತೆ ಪ್ರತಿ ಮಗುವು ಶಿಕ್ಷಣ ಪಡೆಯಬೇಕು. ಶಿಕ್ಷಣದಿಂದ ನಮ್ಮ ಬದುಕು ಹಸನಾಗುತ್ತದೆ. ಇದರ ಜತೆಗೆ ದೇಶದ ಭವಿಷ್ಯವು ಬೆಳಗುತ್ತದೆ. ಹಾಗಾಗಿ ಪಾಲಕರೆಲ್ಲರೂ ಮಕ್ಕಳಿಗೆ ಶಿಕ್ಷಣ ಕೊಡಿಸುವ ಹೊಣೆಗಾರಿಕೆ ನಿಭಾಯಿಸಬೇಕು. ಶಾಲೆಯಲ್ಲಿ ಕಲೆ, ಸಂಸ್ಕೃತಿ, ಕ್ರೀಡೆ ಸೇರಿದಂತೆಇನ್ನಿತರ ಚಟುವಟಿಕೆಗಳಲ್ಲಿ ಸಾಧನೆ ಮಾಡುವ ಮಕ್ಕಳ ಪ್ರತಿಭೆ ಗುರುತಿಸಿ ಪ್ರೋತ್ಸಾಹಿಸುವ ಕೆಲಸವನ್ನು ಪ್ರತಿಯೊಬ್ಬರೂ ಮಾಡಬೇಕು ಎಂದು ಹೇಳಿದರು.

ಸಮೂಹ ಸಂಪನ್ಮೂಲ ವ್ಯಕ್ತಿ ಆರ್. ಈಶ್ವರಪ್ಪ ಮಾತನಾಡಿ, ಪೋಷಕರು ಮಕ್ಕಳನ್ನು ಪ್ರತಿನಿತ್ಯ ಶಾಲೆಗೆ ಕಳಿಸಬೇಕು. ಮಕ್ಕಳ ಶೈಕ್ಷಣಿಕ ಪ್ರಗತಿಗೆ ಶಿಕ್ಷಕರೊಂದಿಗೆ ಕೈಜೋಡಿಸಿ ಅವರ ಭವಿಷ್ಯ ಉಜ್ವಲವಾಗಲು ನೆರವಾಗಬೇಕು. ತಪ್ಪದೆ ತಮ್ಮ ಮಕ್ಕಳನ್ನು ಶಾಲೆಗೆ ದಾಖಲು ಮಾಡುವ ಮೂಲಕ ಶಿಕ್ಷಣ ಇಲಾಖೆಯೊಂದಿಗೆ ಕೈಜೋಡಿಸಿ ಮಕ್ಕಳ ಭವಿಷ್ಯ ರೂಪಿಸಲು ಮುಂದಾಗಬೇಕು ಎಂದರು. ಈ ಸಂದರ್ಭದಲ್ಲಿ ಎಸ್.ಡಿಎಂಸಿ ಅಧ್ಯಕ್ಷೆ ಸುಮಲತಾ, ಉಪಾಧ್ಯಕ್ಷ ತಿಪ್ಪೇಸ್ವಾಮಿ, ಸದಸ್ಯರಾದ ವಾಣಿಶ್ರೀ, ತಿಪ್ಪಮ್ಮ, ಸುಮಯ, ಅನಿತಾ, ರಾಜಣ್ಣ, ಎನ್.ಮಾರುತಿ, ತಿಪ್ಪೇಸ್ವಾಮಿ, ಶಿಕ್ಷಕರಾದ ಎಂ.ವಿ.ಯತೀಶ್, ಎಚ್.ಟಿ.ಮಂಜುಳಮ್ಮ, ಎನ್.ಸುಮಿತ್ರ, ಡಿ.ಕೃಷ್ಣಾರೆಡ್ಡಿ, ಜಿ.ಗಾಯಿತ್ರಿದೇವಿ, ಕೆ.ಎಲ್. ಉಷಾ, ಬಿ.ಎಂ.ಶಿಲ್ಪಾ, ಬಿ.ಕೆ.ಸುಮಾ, ಎಚ್. ಮಂಜುನಾಥ, ಜಿ.ಪಿ.ಚಂದನ ಸೇರಿದಂತೆ ಪೋಷಕರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಬಾಲ್ಯವಿವಾಹ ನಿಷೇಧ ಕುರಿತು ಅರಿವು

» ಮೊದಲ ಪುಟದಿಂದ

ಬಾಲ್ಯ ವಿವಾಹ ತಡೆಯುವ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯಿತಿಯ ಚುನಾಯಿತ ಸದಸ್ಯರು ಮತ್ತು ಅಧ್ಯಕ್ಷರು ಹಾಗೂ ಗ್ರಾಮಸ್ಥರ ಪಾತ್ರಗಳ ಪ್ರಾಮುಖ್ಯತೆಯ ಬಗ್ಗೆ ತಿಳಿಸಿದರು. ಬಾಲ್ಯ ವಿವಾಹ ನಡೆಯುತ್ತಿರುವುದು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿಗೆ 1098 ಸಂಪರ್ಕಿಸಲು ಹಾಗೂ ಮಹಿಳೆಯರ ಮೇಲೆ ದೌರ್ಜನ್ಯಗಳಾದ ಸಂದರ್ಭದಲ್ಲಿ ಮಹಿಳಾ ಸಹಾಯವಾಣಿ 181 ಸಂಪರ್ಕಿಸುವಂತೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಅಂಜನಪ್ಪ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಂಜುಳಾ ಹಾಗೂ ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ಗ್ರಾಮಸ್ಥರು ಹಾಜರಿದ್ದರು.

### ವೈದ್ಯಕೀಯ ಮತ್ತು ದಂತ ವೈದ್ಯಕೀಯ ವಿದ್ಯಾಭ್ಯಾಸಕ್ಕಾಗಿ ಡಿಫೆನ್ಸ್ ಕೋಟಾ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

» ಚಿತ್ರದುರ್ಗ

2024-25ನೇ ಶೈಕ್ಷಣಿಕ ಸಾಲಿನಲ್ಲಿ ಮಾಜಿ ಸೈನಿಕರು, ಮಾಜಿ ಸೈನಿಕ ಅವಲಂಬಿತರ ಮಕ್ಕಳ ವೈದ್ಯಕೀಯ ಮತ್ತು ದಂತ ವೈದ್ಯಕೀಯ ವ್ಯಾಸಂಗಕ್ಕಾಗಿ ಕೇಂದ್ರ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಸೀಟು ಹಂಚಿಕೆಯ ಮೇರೆಗೆ, ಕೇಂದ್ರೀಯ ಸೈನಿಕ ಮಂಡಳಿಯಿಂದ ಡಿಫೆನ್ಸ್ ಕೋಟಾದಡಿಯಲ್ಲಿ ಆದ್ಯತೆಯ ಮೇರೆಗೆ ಸೀಟು ಹಂಚಿಕೆ ಲಭ್ಯವಿದೆ. ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀಕ್ಷೆ (ಓಇಇಖ) ಯಲ್ಲಿ ಅರ್ಹತೆಯನ್ನು ಪಡೆದಿರುವ ವಿದ್ಯಾರ್ಥಿಗಳು ಕೇಂದ್ರೀಯ ಸೈನಿಕ ಮಂಡಳಿ ಜಾಲತಾಣದಲ್ಲಿ ದಿನಾಂಕ 10 ಜೂನ್ 2024 ರಿಂದ 09 ಜುಲೈ 2024 ರೊಳಗಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯಿಂದ ಪಡೆದ ದೃಢೀಕೃತ ಅರ್ಹತಾ ಪ್ರಮಾಣ ಪತ್ರದೊಂದಿಗೆ ಅರ್ಜಿಯನ್ನು ಸಲ್ಲಿಸಬಹುದಾಗಿದ್ದ ಸಮಯವನ್ನು ವಿಸ್ತರಿಸಲಾಗಿದ್ದು, ಆಗಸ್ಟ್ 11ರವರೆಗೆ ಅವಕಾಶ ಕಲ್ಪಿಸಲಾಗಿದೆ. ವಿವರವಾದ ಮಾಹಿತಿಯನ್ನು ಕೇಂದ್ರೀಯ ಸೈನಿಕ ಮಂಡಳಿಯ ಜಾಲತಾಣ "ONLINE.KSB.GOV.IN"ದಲ್ಲಿ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಛೇರಿ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಇವರ ದೂರವಾಣಿ ಸಂಖ್ಯೆ 08182-220925 ಯನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಪ್ರಾಧಿಕಾರದ ಪ್ರಕಟಣೆಗಳಿಗೆ ಶೇ.50 ರಿಯಾಯಿತಿ

» ಚಿತ್ರದುರ್ಗ

ಸ್ವಾತಂತ್ರ್ಯೋತ್ಸವದ ಅಂಗವಾಗಿ 2024ರ ಆಗಸ್ಟ್ ತಿಂಗಳು ಪೂರ್ತಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇ.50ರ ರಿಯಾಯಿತಿ ದರಗಳಲ್ಲಿ ಮಾರಾಟ ಮಾಡಲಾಗುವುದು. ಪುಸ್ತಕ ಪ್ರಿಯರು ಈ ಅವಕಾಶ ಬಳಸಿಕೊಳ್ಳಲು ಕೋರಿದೆ. ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯಲ್ಲಿ ಹಾಗೂ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಈ ರಿಯಾಯಿತಿ ಸೌಲಭ್ಯ ದೊರೆಯಲಿದೆ. ಅಲ್ಲದೆ ಕನ್ನಡಪುಸ್ತಕ ಪ್ರಾಧಿಕಾರದ ಆನ್‌ಲೈನ್ https://kpp.karnataka.gov.in (ಆನ್ಲೈನ್ ಪುಸ್ತಕ ಖರೀದಿಗೆ ಇಲ್ಲಿ ವೀಕ್ಷಿಸಿ ವಿಭಾಗ) ನಲ್ಲಿ ಕೂಡ ಈ ಶೇ.50 ರಿಯಾಯಿತಿ ಲಭ್ಯವಿದೆ. ಕನ್ನಡ ಪುಸ್ತಕ ಪ್ರಾಧಿಕಾರವು ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಸಂಬಂಧಿಸಿದಂತೆ, ಎಲ್ಲಾ ಪ್ರಕಾರದ ಸಾಹಿತ್ಯ ಕೃತಿಗಳನ್ನು ಈವರೆಗೆ ಪ್ರಕಟಿಸುತ್ತಾ ಬಂದಿದೆ. ಇವುಗಳಲ್ಲಿ ವ್ಯಕ್ತಿಚಿತ್ರಗಳು, ನಾಟಕಗಳು, ಅಲೆಮಾರಿ ಸಮುದಾಯ, ವೈದ್ಯಕೀಯ, ಪ್ರಾಚೀನ ಕನ್ನಡ ಸಾಹಿತ್ಯ, ಜಾನಪದ, ಪರಿಸರ, ಕೃಷಿ ಹೀಗೆ ಹಲವು ಹತ್ತು ಪ್ರಕಾರಗಳಲ್ಲಿ ಸಾಹಿತ್ಯ ಕೃತಿಗಳನ್ನು ಇದುವರೆಗೆ ಸುಮಾರು 704 ಶೀರ್ಷಿಕೆಗಳನ್ನು ಮುದ್ರಿಸಿ ಪ್ರಕಟಿಸಿದೆ. ಅತ್ಯಂತ ಮೌಲಿಕವಾದ, ಪ್ರಾಜ್ಞರಿಂದ ರಚಿತವಾದ ಈ ಕೃತಿಗಳನ್ನು ಜನಸಾಮಾನ್ಯರಿಗೆ ಸುಲಭ ಬೆಲೆಯಲ್ಲಿ ತಲುಪಿಸಬೇಕೆಂಬ ಉದ್ದೇಶ ಹೊಂದಿದೆ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಆಡಳಿತಾಧಿಕಾರಿ ಕೆ.ಬಿ.ಕಿರಣ್ ಸಿಂಗ್ ತಿಳಿಸಿದ್ದಾರೆ.

### ಆ.1 ರಿಂದ 8 ರವರೆಗೆ ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

ಚಿತ್ರದುರ್ಗ ಗ್ರಾಮೀಣ ಉಪ ವಿಭಾಗ ಬೆಸ್ಕಾಂ ವ್ಯಾಪ್ತಿಯಲ್ಲಿ ಬರುವ ಹಿರೇಗುಂಟನೂರು ಶಾಖಾ ವ್ಯಾಪ್ತಿಯಲ್ಲಿ ಹಿರೆಗುಂಟನೂರು ಗ್ರಾಮದಿಂದ ಗುತ್ತಿನಾಡು ಗ್ರಾಮದವರೆಗೆ 11 ಕೆ.ವಿ ಲಿಂಕ್ ಲೈನ್ ಮಾರ್ಗ ರಚಿಸುವ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಆಗಸ್ಟ್ 1 ರಿಂದ 8 ರವರೆಗೆ ಬೆಳಿಗ್ಗೆ 11 ರಿಂದ ಸಂಜೆ 5 ವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

ವ್ಯಸನಮುಕ್ತ ದಿನಾಚರಣೆ ನಿಮಿತ್ಯ ಲೇಖನ

# ದುಶ್ಚಟಗಳನ್ನೇ ತಮ್ಮ ಜೋಳಿಗೆಯಲ್ಲಿ ಭಿಕ್ಷೆಯ ರೂಪದಲ್ಲಿ ಸಂಗ್ರಹ

» ಚಿತ್ರದುರ್ಗ

ದೇಶವಿದೇಶಗಳಲ್ಲಿಸಂಚರಿಸಿ,ಜನರಲ್ಲಿನದುಶ್ಚಟಗಳನ್ನೇ ತಮ್ಮ ಜೋಳಿಗೆಯಲ್ಲಿ ಭಿಕ್ಷೆಯ ರೂಪದಲ್ಲಿ ಸಂಗ್ರಹಿಸಿ, ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಅವಿರತವಾಗಿ ಶ್ರಮಿಸಿದವರು ಡಾ.ಮಹಾಂತ ಶಿವಯೋಗಿಗಳು. ಇಂತಹ ಮಹಾನ್ ಯೋಗಿಗಳ ಆಗಸ್ಟ್ 01 ರ ಜನ್ಮ ದಿನವನ್ನು ವ್ಯಸನಮುಕ್ತ ದಿನಾಚರಣೆಯನ್ನಾಗಿ ರಾಜ್ಯಾದ್ಯಂತ ಆಚರಿಸಲಾಗುತ್ತಿದೆ.

ಬಾಗಲಕೋಟೆಯ ಜಮಖಂಡಿ ತಾಲೂಕಿನ ಹಿಪ್ಪರಗಿ ಗ್ರಾಮದಲ್ಲಿ ಆಗಸ್ಟ್ 1, 1930 ರಲ್ಲಿ ಜನಿಸಿದ ಡಾ.ಮಹಾಂತ ಶಿವಯೋಗಿಗಳು ತಮ್ಮ 10ನೇ ವಯಸ್ಸಿಗೆ ಸವದಿಯ ವಿರಕ್ತಮಠದ ಕಿರಿಯ ಸ್ವಾಮೀಜಿಗಳಾದರು.

ಕಾಶಿಯಲ್ಲಿ ಸಂಸ್ಕೃತ, ಹಿಂದಿ, ಯೋಗ, ಶಾಸ್ತ್ರೀಯ ಸಂಗೀತದಲ್ಲಿ ವಿಶೇಷ ಪರಿಣಿತಿ ಸಾಧಿಸಿದರು. ಉತ್ತರ ಕರ್ನಾಟಕದಲ್ಲಿ ಭೀಕರ ಬರಗಾಲ ಬಂದ ಕಾರಣ ಕಾಶಿಯಿಂದ ಆಗಮಿಸಿ, ನೂರಾರು ಗ್ರಾಮಗಳಲ್ಲಿ ಗಂಜಿ ಕೇಂದ್ರ ಆರಂಭಿಸಿ ದಾಸೋಹ ಮಾಡಿದ್ದು ಮಾತ್ರವಲ್ಲದೇ ಗೋಶಾಲೆಗಳನ್ನು ಆರಂಭಿಸಿ ಮೇವು ಮತ್ತು ನೀರಿನ ವ್ಯವಸ್ಥೆ ಮಾಡಿದರು. 1970 ರಲ್ಲಿ ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನ ಮಠದ 19ನೇ ಪೀಠಾಧಿಕಾರಿಯಾಗಿ ನಂತರ 2018 ರ ವರೆಗೆ ಅಖಂಡ 48 ವರ್ಷಗಳ ಕಾಲ ಅವರ ಸಾಧನೆ ಅಪಾರವಾದುದು.ನಿರಂತರ ಅನ್ನ ದಾಸೋಹ, ವಚನ ಮಾಂಗಲ್ಯ, ದೇವದಾಸಿ ವಿಮೋಚನಾ ಸಂಸ್ಥೆ, ದೇವದಾಸಿಯರ ಮಕ್ಕಳಿಗೆ ಟ್ರಸ್ಟ್ ಸ್ಥಾಪನೆ, ನಿರುದ್ಯೋಗಿಗಳಿಗೆ ಮತ್ತು ವಿಧವೆಯರಿಗೆ ಕಾಯಕ ಸಂಜೀವಿನಿ ಸಂಸ್ಥೆ ಸ್ಥಾಪನೆ, ನಿಸರ್ಗ ಚಿಕಿತ್ಸೆ-ಯೋಗ ಕೇಂದ್ರ ಸ್ಥಾಪನೆ, ಶಾಖಾ ಮಠಗಳಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಯುವಕರಿಗೆ ಧರ್ಮ ಸಂಸ್ಕಾರ ನೀಡಿ ಪಟ್ಟಾಭಿಷೇಕ ಮಾಡಿದ್ದು, ಮಹಿಳಾ ಸಾಧಕಿಯರಿಗೆ ಜಂಗಮ ದೀಕ್ಷೆ ನೀಡಿ ಮಠಾಧಿಕಾರಿಯನ್ನಾಗಿ ಮಾಡಿದ್ದು, ಮಠದ ನೂರಾರು ಎಕರೆ ಭೂಮಿಯನ್ನು ಆಯಾ ಗ್ರಾಮಗಳ ರೈತರಿಗೆ ಕೃಷಿ ಮಾಡಿ ಬದುಕಲು ನೀಡಿದ್ದು ಮುಂತಾದ ಹಲವು ಸಮಾಜಮುಖಿ ಕಾರ್ಯಗಳನ್ನು ಮಾಡಿದರು.ಪ್ರಮುಖವಾಗಿ ಸ್ವಾಮೀಜಿಯವರು ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ 1975 ರಿಂದ ಕೈಗೊಂಡ ಮಹಾಂತ ಜೋಳಿಗೆ ಕಾರ್ಯಕ್ರಮ ಅತ್ಯಂತ ವಿಶಿಷ್ಟವಾದುದು, ಕುಡಿತದ ಚಟದಿಂದ ಪರಿಶಿಷ್ಟ ಜಾತಿಯ ಯುವಕನೊಬ್ಬ ನಿಧನದ ಸುದ್ದಿ ಕೇಳಿ ಅವನ ಕೇರಿಗೆ ಸಾಂತ್ವನ ಹೇಳಲು ತೆರಳಿದ್ದ ಸ್ವಾಮಿಗಳಿಗೆ ಆತನ ಪತ್ನಿ ಮತ್ತು ಮಕ್ಕಳು ಉಪವಾಸದಿಂದ ದು:ಖಿಸುವುದನ್ನು ಕಂಡರು. ಇಂತಹ ಸಾವಿರಾರು ಕುಟುಂಬಗಳ ಕುಡಿತ ಮತ್ತು ಇತರೇ ದುಶ್ಚಟಗಳಿಂದ



ಹಾಳಾಗಿರುವುದನ್ನು ಅರಿತು, ಇಂತಹ ದುಶ್ಚಟಗಳಿಗೆ ಒಳಗಾಗಿರುವವನ್ನು ಮುಕ್ತಿಗೊಳಿಸುವ ಉದ್ದೇಶದಿಂದ ಮಹಾಂತ ಜೋಳಿಗೆ ಯೋಜನೆ ಆರಂಭಿಸಿದರು.

ಬಟ್ಟೆಯ ಚೀಲದ ಜೋಳಿಗೆ ಹಿಡಿದು, ಕುಡಿತದ ಚಟದಿಂದ ನಿಧನನಾದ ಪರಿಶಿಷ್ಟ ಜಾತಿಯ ಯುವಕನ ಕೇರಿಗೆ ಮೊದಲಿಗೆ ತೆರಳಿದ ಸ್ವಾಮೀಜಿಗಳು, ಅಲ್ಲಿನ ಗುಡಿಸಲು ಮನೆಗಳಿಗೆ ತೆರಳಿ ಮದ್ಯಪಾನ, ತಂಬಾಕು ಸೇರಿದಂತೆ ಎಲ್ಲಾ ರೀತಿಯ ದುಶ್ಚಟಗಳ ಬಗ್ಗೆ ಅಲ್ಲಿನ ಜನತೆಗೆ ಮನ ಮುಟ್ಟುವಂತೆ ತಿಳುವಳಿಕೆ ನೀಡಿ ಮನಪರಿವರ್ತನೆ ಮಾಡಿದರು.

ದುರ್ವಸನಿಗಳು ತಮ್ಮ ಎಲ್ಲಾ ದುಶ್ಚಟಗಳ ವಸ್ತುಗಳನ್ನು ಸ್ವಾಮೀಜಿ ಅವರ ಜೋಳಿಗೆಗೆ ಹಾಕಿ, ಇನ್ನೆಂದೂ ಅವುಗಳನ್ನು ಬಳಸುವುದಿಲ್ಲ ಎಂದು ಪ್ರಮಾಣ ಮಾಡಿದರು.

ಜಾತಿ-ಮತ-ಪಂಗಡ-ಧರ್ಮ-ಭಾಷೆ-ದೇಶವೆನ್ನದೇ ಇಡೀ 42 ವರ್ಷಗಳ ಕಾಲ ದೇಶದಲ್ಲಿ ಮಾತ್ರವಲ್ಲದೇ ಇಂಗ್ಲೆಂಡ್ ಸೇರಿದಂತೆ ವಿದೇಶದಲ್ಲೂ ತಮ್ಮ ಮಹಾಂತ ಜೋಳಿಗೆ ಹಿಡಿದು ಜನರಲ್ಲಿನ ದುಶ್ಚಟಗಳ ಭಿಕ್ಷೆ ಬೇಡಿದರು.

ಮಹಾಂತ ಶಿವಯೋಗಿಗಳು ವ್ಯಸನ ಮುಕ್ತ ವ್ಯಕ್ತಿ-ಕುಟುಂಬ-ಸಮಾಜ-ಗ್ರಾಮಗಳ ನಿರ್ಮಾಣ ಮಾಡುವ ಜೊತೆಗೆ ತಮ್ಮ ಜೋಳಿಗೆ ಕಾರ್ಯಕ್ರಮದಲ್ಲಿ ನಾಡಿನ ಪ್ರಖ್ಯಾತ ವೈದ್ಯರು, ಸಮಾಜ ವಿಜ್ಞಾನಿಗಳು, ಸಾಹಿತಿಗಳು, ಸಮಾಜ ಕಳಕಳಿಯ ಕವಿಗಳು, ಧರ್ಮ ಗುರುಗಳನ್ನು ಆಹ್ವಾನಿಸಿ ಅವರಿಂದ ಉಪನ್ಯಾಸಗಳನ್ನು ಮಾಡಿಸುವ ಮೂಲಕ ವ್ಯಸನಗಳ ಮನಪರಿವರ್ತನೆ ಮಾಡುವುದರ ಜೊತೆಗೆ ಮಕ್ಕಳು, ವಿದ್ಯಾರ್ಥಿಗಳು-ಯುವ ಜನಾಂಗ ಇಂತಹ ಚಟಗಳಿಗೆ ಬಲಿಯಾದಂತೆ ಅರಿವು ಮೂಡಿಸುತ್ತಿದ್ದರು. ಇದರಿಂದಾಗಿ ಲಕ್ಷಾಂತರ ಜನ ವ್ಯಸನಗಳಿಂದ ಮುಕ್ತರಾಗಿ ಅವರ ಕುಟುಂಬಗಳು ನೆಮ್ಮದಿಯ ಜೀವನ ಸಾಗಿಸುತ್ತಿವೆ.

ಡಾ.ಮಹಾಂತ ಶಿವಯೋಗಿ ಅವರ ಜನ್ಮದಿನವಾದ ಆಗಸ್ಟ್ 01 ರ ದಿನವನ್ನು ರಾಜ್ಯ ಸರ್ಕಾರವು ರಾಜ್ಯಾದ್ಯಂತ ವ್ಯಸನ ಮುಕ್ತ ದಿನವನ್ನಾಗಿ ಆಚರಿಸಲು ನಿರ್ಧರಿಸಿ ಆದೇಶಿಸಿದ್ದು, ಕರ್ನಾಟಕ ರಾಜ್ಯವನ್ನು ವ್ಯಸನ ಮುಕ್ತ ರಾಜ್ಯವಾಗಿ ಮಾಡಲು ಸಾರ್ವಜನಿಕರು ಹಾಗೂ ಯುವಜನತೆ ವ್ಯಸನಗಳಿಂದ ಮುಕ್ತವಾಗಲು ಈ ದಿನಾಚರಣೆಯು ಪ್ರೇರಣೆಯಾಗಲಿದೆ.

ಆಗಸ್ಟ್ 01ರಂದು ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದಲ್ಲಿ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಶಾಲಾ ಕಾಲೇಜು ವಿದ್ಯಾರ್ಥಿಗಳು ಸಾರ್ವಜನಿಕರನ್ನು ಒಗ್ಗೂಡಿಸಿ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಕೈ ಜೋಡಿಸುವ ವಚನ ಪ್ರಮಾಣ ಹಾಗೂ ಜಯಂತಿ ಕಾರ್ಯಕ್ರಮ ಜಾಥಾ ಆಯೋಜಿಸಿ ಶ್ರೀಗಳ ಜಯಂತಿ ಆಚರಿಸಲಾಗುತ್ತಿದೆ.

## ಶಿಕ್ಷಣ ಇಲಾಖೆಯ ಸೇವೆ ಹೆಚ್ಚು ಗೌರವ ತರುತ್ತದೆ

» ಚಳ್ಳಕೆರೆ

ಶಿಕ್ಷಣ ಇಲಾಖೆಯಲ್ಲಿ ವಿಶೇಷವಾಗಿ ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಸೇವೆ ಸಲ್ಲಿಸುವ ಸಂದರ್ಭದಲ್ಲಿ ವಿದ್ಯಾರ್ಥಿಗಳ ಶಿಕ್ಷಣದ ಜೊತೆಯಲ್ಲಿ ಶೈಕ್ಷಣಿಕ ಪ್ರಗತಿಯತ್ತ ಸಹ ಹೆಚ್ಚು ಗಮನ ನೀಡಬೇಕಾಗುತ್ತದೆ. ಇತ್ತೀಚಿನ ವರ್ಷಗಳಲ್ಲಿ ಶಿಕ್ಷಣ ಇಲಾಖೆ ಹಲವಾರು ನೂತನ ರೂಪುರೇಷೆಗಳೊಂದಿಗೆ ಕಾರ್ಯನಿರ್ವಹಿಸುತ್ತಿದೆ. ಸೇವೆಯಿಂದ ನಿವೃತ್ತರಾಗುತ್ತಿರುವ ಪ್ರಾಂಶುಪಾಲ ಎಂ.ರವೀಶ್ ಸೇವೆಯನ್ನು ಸದಾಸ್ಮರಿಸಬೇಕೆಂದು ಪ್ರಭಾರಪ್ರಾಂಶುಪಾಲ ಕೆ.ಎನ್.ವಸಂತಕುಮಾರ್ ತಿಳಿಸಿದರು.

ಅವರು, ಬುಧವಾರ ಕಾಲೇಜು ಆವರಣದಲ್ಲಿ ಸೇವೆಯಿಂದ ನಿವೃತ್ತರಾದ ಪ್ರಾಂಶುಪಾಲ ಎಂ.ರವೀಶ್‌ರವರನ್ನು ಸನ್ಮಾನಿಸಿ ಮಾತನಾಡಿದರು. ಪ್ರಸ್ತುತ ನಮ್ಮ ಕಾಲೇಜಿನಲ್ಲಿ ಎಂ.ರವೀಶ್‌ರವರು ಪ್ರಾರಂಭದ ಹಂತದಲ್ಲಿ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿ ಎರಡನೇ ಬಾರಿಗೆ ಪ್ರಾಂಶುಪಾಲರಾಗಿ ಸೇವೆ ಸಲ್ಲಿಸಿದ್ದರು. ವಿದ್ಯಾರ್ಥಿಗಳಿಗಳಲ್ಲಿ ಶಿಸ್ತು ಮೂಡಿಸುವ ಕಾರ್ಯವನ್ನು ಸಹ ಅವರು ಮಾಡಿದ್ದಾರೆ ಎಂದರು.

ಜಿಲ್ಲಾ ಉಪನ್ಯಾಸಕ ಸಂಘದ ಮಾಜಿ ಅಧ್ಯಕ್ಷ ಎಸ್.ಲಕ್ಷ್ಮಣ್ ಮಾತನಾಡಿ, ರವೀಶ್‌ರವರ ಜೊತೆಯಲ್ಲಿ ಕೆಲವು ವರ್ಷಗಳ ಕಾಲ ನಾನೂ ಸಹ ಸೇವೆ ಮಾಡಿದ್ದೇನೆ. ಬೋಧನಾ ವಿಷಯದಲ್ಲಿ ಅವರಿಗೆ ಇದ್ದ ಕಳಿಕಳಿಯನ್ನು ಎಲ್ಲರೂ ಮೆಚ್ಚಬೇಕು ಎಂದರು.

ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ಎಂ.ರವೀಶ್, ಸರ್ಕಾರಿ ಪದವಿಪೂರ್ವ ಕಾಲೇಜು ಉತ್ತಮ ಉಪನ್ಯಾಸಕರನ್ನು ಹೊಂದಿದೆ. ವಿದ್ಯಾರ್ಥಿಗಳು ಶ್ರಮವಹಿಸಿ ಅಭ್ಯಾಸ ಮಾಡಬೇಕಿದೆ. ವಿವಿಧ ವಿಷಯಗಳಲ್ಲಿ ನುರಿತ ಉಪನ್ಯಾಸಕ ವೃಂದ ಇಲ್ಲಿದೆ, ಎಲ್ಲಾ ಚಟುವಟಿಕೆಗಳಿಗೂ ಉತ್ತಮ ಸಹಕಾರವನ್ನು ನೀಡುತ್ತಾ ಬಂದಿದೆ.

ಈ ಬಾರಿಯ ಫಲಿತಾಂಶ ಹೆಚ್ಚಳಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ನಿವೃತ್ತ ಪ್ರಾಂಶುಪಾಲ ಪಿ.ಎನ್.ಕೃಷ್ಣಪ್ರಸಾದ್, ಉಪನ್ಯಾಸಕರಾದ ಬಿ.ಶಾಂತಕುಮಾರಿ, ಪುಷ್ಪಲತಾ, ರೂಪರವೀಶ್, ಹಬೀಬುಲ್ಲಾ, ಬೆಳಗಟ್ಟನಾಗರಾಜು, ಚಂದ್ರಶೇಖರ್, ಶೋಭಾ, ನಸ್ರತ್‌ಉನ್ನೀಸ, ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.



ಚಳ್ಳಕೆರೆ ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ನಿವೃತ್ತರಾದ ಪ್ರಾಂಶುಪಾಲ ಎಂ.ರವೀಶ್, ರೂಪ ದಂಪತಿಗಳನ್ನು ಸನ್ಮಾನಿಸಲಾಯಿತು.

ಪ್ರಮುಖ ಸುದ್ದಿ

# ಸಂಖ್ಯಾಶಾಸ್ತ್ರಕ್ಕೆ ಅಡಿಪಾಯ ಹಾಕಿದ ಮಹಾನ್ ವ್ಯಕ್ತಿ ಪ್ರೊ. ಪಿ.ಸಿ ಮಹಾಲನೋಬಿಸ್; ಜಿ.ಪಂ.ಉಪಕಾರ್ಯದರ್ಶಿ ಕೃಷ್ಣನಾಯ್ಕ್

» ದಾವಣಗೆರೆ

ಸಂಖ್ಯಾಶಾಸ್ತ್ರಕ್ಕೆ ಅಡಿಪಾಯ ಹಾಕಿದ ಮಹಾನ್‌ವ್ಯಕ್ತಿಪ್ರೊ.ಪಿ.ಸಿಮಹಾಲನೋಬಿಸ್ ಎಂದು ಜಿ.ಪಂ.ಉಪಕಾರ್ಯದರ್ಶಿ ಕೃಷ್ಣನಾಯ್ಕ್ ತಿಳಿಸಿದರು.

ಅವರು ಬುಧವಾರ (ಜು.31) ಜಿಲ್ಲಾಡಳಿತ ಭವನದಲ್ಲಿನ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯಲ್ಲಿ ಪ್ರೊ.ಪಿ.ಸಿ.ಮಹಾಲನೋಬಿಸ್‌ರ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಸಾಂಖ್ಯಿಕ ದಿನಾಚರಣೆ ಕಾರ್ಯಕ್ರಮ ಮಾತನಾಡಿದರು.

ಮಹಾಲನೋಬಿಸ್‌ರವರು ದೇಶಕ್ಕೆ ನೀಡಿದ ಕೊಡುಗೆಗಳು ಶ್ಲಾಘನೀಯ. ಅವರು ಅಂಕಿ ಅಂಶಗಳ ಮೂಲಕ ಸಮೀಕ್ಷೆ ಮಾಡುವುದನ್ನು ತೋರಿಸಿ ಕೊಟ್ಟವರು. ಮಾದರಿ ಸಮೀಕ್ಷೆ ಅವರ ಅನನ್ಯ ಕೊಡುಗೆಯಾಗಿದ್ದು, ದೇಶದ ಆರ್ಥಿಕ ಅಭಿವೃದ್ಧಿಗೆ ಪೂರಕವಾಗಿ ಅಂಕಿ ಅಂಶಗಳ ಸಮೀಕ್ಷೆಗಳು ಸಹಕಾರಿಯಾಗಿವೆ ಎಂದರು.




ಸರ್ಕಾರಿ ಯೋಜನೆಗಳನ್ನು ರೂಪಿಸುವಲ್ಲಿ ಅಂಕಿ ಸಂಖ್ಯೆಗಳ ಪಾತ್ರ ಮುಖ್ಯವಾಗಿದೆ. ನಂಬಲಾರ್ಹ ಅಂಕಿ ಅಂಶಗಳನ್ನು ಕಾಲಮಿತಿಯೊಳಗೆ ಸಂಗ್ರಹಿಸಿ ವಿಶ್ಲೇಷಣಾ ವರದಿಯನ್ನು ಪ್ರಕಟಿಸುವಲ್ಲಿ ಸಾಂಖ್ಯಿಕ ಇಲಾಖೆಯ ಪಾತ್ರ ಪ್ರಮುಖವಾಗಿದೆ ಎಂದು ತಿಳಿಸಿದರು.

ಪ್ರೊ. ಪಿ.ಸಿ ಮಹಾಲನೋಬಿಸ್ ಭಾರತೀಯ ಸಂಖ್ಯಾಶಾಸ್ತ್ರೀಯ ಸಂಸ್ಥೆಯನ್ನು ಸ್ಥಾಪಿಸಿದರು ಮತ್ತು ದೇಶದ ಆರ್ಥಿಕ ಯೋಜನೆ ಮತ್ತು ಅಂಕಿಅಂಶಗಳ ಅಭಿವೃದ್ಧಿ ಕ್ಷೇತ್ರದಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ ಮಾತನಾಡಿ ಸಂಖ್ಯಾಶಾಸ್ತ್ರಜ್ಞ ಪ್ರೊ.ಪಿ.ಸಿ. ಮಹಾಲನೋಬಿಸ್ ಜಯಂತಿಯನ್ನು ಸಾಂಖ್ಯಿಕ ದಿನವನ್ನಾಗಿ ಆಚರಿಸುತ್ತಿರುವುದು ಅರ್ಥಪೂರ್ಣವಾಗಿದೆ. ಜಿಲ್ಲೆಯಲ್ಲಿ ಸಾಂಖ್ಯಿಕ ಇಲಾಖೆ ಕೈಗೊಳ್ಳುವ ಜನನ-ಮರಣ ನೋಂದಣಿ, ಕೃಷಿ ಅಂಕಿ ಅಂಶಗಳು, ಬೆಳೆ ಅಂದಾಜು ಸಮೀಕ್ಷೆ, ಧಾರಣಿ ವರದಿ, ರಾಷ್ಟ್ರೀಯ ಮಾದರಿ ಸಮೀಕ್ಷೆ, ಜಿಲ್ಲಾ ಅಂಕಿ ಅಂಶ ನೋಟದ ಪ್ರಕಟಣೆ ಮುಂತಾದ ಕಾರ್ಯಗಳು ಅಭಿವೃದ್ಧಿ ಗಣನೆಯಲ್ಲಿ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಉಪನಿರ್ದೇಶಕಿ ಶಾರದಾ ದೊಡ್ಡಗೌಡ್ರು , ಸಾಂಖ್ಯಿಕ ಅಧಿಕಾರಿ ನೀಲಾ, ಕೌಶಲ್ಯ ಅಭಿವೃದ್ಧಿ ಸಹಾಯಕ ನಿರ್ದೇಶಕರಾದ ಡಾ. ಸಿದ್ದೇಶ್, ಇ.ಒ.ರಾಮ್‌ಬೋವಿ, ಜಿಲ್ಲಾ ಸಾಂಖ್ಯಿಕ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಪುಸ್ತಕ ಪ್ರಾಧಿಕಾರದಿಂದ ಶೇ 50 ರ ರಿಯಾಯಿತಿ

» ದಾವಣಗೆರೆ

ಕನ್ನಡ ಪುಸಕ್ತ ಪ್ರಾಧಿಕಾರದಿಂದ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ' ಆಗಸ್ಟ್ ತಿಂಗಳಲ್ಲಿ ಎಲ್ಲಾ ಪುಸ್ತಕಗಳ ಮೇಲೆ ಶೇ 50%ರ ರಿಯಾಯಿತಿ ದರಗಳಲ್ಲಿ ಮಾರಾಟ ಮಾಡಲಾಗುವುದು. ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯಲ್ಲಿ ಹಾಗೂ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಈ ರಿಯಾಯಿತಿ ಸೌಲಭ್ಯ ದೊರೆಯಲಿದೆ. ಅಲ್ಲದೆ ಕನ್ನಡ ಪುಸ್ತಕ ಪ್ರಾಧಿಕಾರದ ಆನ್ ಲೈನ್ γಣಣಠಿ://ಇಠಿಠಿ.ಇಚಿಡಿಟಚಿಣಚಿಇಚಿ.ಠಡಿಡಿ.ಜಟ ನಲ್ಲಿ ಕೂಡ ಈ ರಿಯಾಯಿತಿ ಲಭ್ಯವಿದೆ. ಕನ್ನಡ ಪುಸ್ತಕ ಪ್ರಾಧಿಕಾರವು ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಸಂಬಂಧಿಸಿದಂತೆ, ಎಲ್ಲಾ ಪ್ರಕಾರದ ಸಾಹಿತ್ಯ ಕೃತಿಗಳನ್ನು ಈವರೆಗೆ ಪ್ರಕಟಿಸುತ್ತಾ ಬಂದಿದೆ. ಇವುಗಳಲ್ಲಿ ವ್ಯಕ್ತಿ ಚಿತ್ರಗಳು, ನಾಟಕಗಳು, ಅಲೆಮಾರಿ ಸಮುದಾಯ, ವೈದ್ಯಕೀಯ, ಪ್ರಾಚೀನ ಕನ್ನಡ ಸಾಹಿತ್ಯ, ಜಾನಪದ, ಪರಿಸರ, ಕೃಷಿ ಹೀಗೆ ಹಲವು ಹತ್ತು ಪ್ರಕಾರಗಳಲ್ಲಿ ಸಾಹಿತ್ಯ ಕೃತಿಗಳನ್ನು ಇದುವರೆಗೆ ಸುಮಾರು 704 ಶೀರ್ಷಿಕೆಗಳನ್ನು ಮುದ್ರಿಸಿ ಪ್ರಕಟಿಸಿದೆ. ಅತ್ಯಂತ ಮೌಲಿಕವಾದ, ಪ್ರಾಜ್ಞರಿಂದ ರಚಿತವಾದ ಈ ಕೃತಿಗಳನ್ನು ಜನಸಾಮಾನ್ಯರಿಗೆ ಸುಲಬ ಬೆಲೆಯಲ್ಲಿ ತಲುಪಿಸಬೇಕೆಂಬುದು ಪ್ರಾಧಿಕಾರದ ಉದ್ದೇಶವಾಗಿದೆ ಎಂದು ಆಡಳಿತಾಧಿಕಾರಿ ಕಿರಣ್ ಸಿಂಗ್ ತಿಳಿಸಿದ್ದಾರೆ.

### ಅವಧಿ ವಿಸ್ತರಣೆ

» ದಾವಣಗೆರೆ

ವೈದ್ಯಕೀಯ ಮತ್ತು ದಂತ ವೈದ್ಯಕೀಯ ವಿದ್ಯಾಭ್ಯಾಸಕ್ಕಾಗಿ ಡಿಫೆನ್ಸ್ ಖೋಟಾದಡಿ ಅರ್ಜಿ ಸಲ್ಲಿಸುವ ಅವಧಿಯನ್ನು ಆಗಸ್ಟ್ 11 ರವರೆಗೆ ವಿಸ್ತರಣೆ ಮಾಡಲಾಗಿದೆ. ವಿವರವಾದ ಮಾಹಿತಿಯನ್ನು ಕೇಂದ್ರೀಯ ಸೈನಿಕ ಮಂಡಳಿಯ ಜಾಲತಾಣ "ONLINE.KSB.GOV.IN" ದಲ್ಲಿ ಪಡೆಯಬಹುದು. ಹಾಗೂ ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಚೇರಿ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಇವರ ದೂರವಾಣಿ ಸಂಖ್ಯೆ 08182–220925 ಸಂಪರ್ಕಿಸಬಹುದೆಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

### ಉಮೇಶ್ ಕಾರಜೋಳ ಜನ್ಮದಿನ: ಬ್ರೆಡ್ ವಿತರಣೆ



» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸದಸ್ಯರಾದ ಗೋವಿಂದ ಕಾರಜೋಳರವರ ಪುತ್ರ ರಾಜ್ಯ ಎಸ್.ಸಿ. ಮೋರ್ಚಾದ ಪ್ರಧಾನ ಕಾರ್ಯದರ್ಶಿಗಳಾದ ಉಮೇಶ್ ಕಾರಜೋಳರವರ 46ನೇ ಹುಟ್ಟು ಹಬ್ಬದ ಅಂಗವಾಗಿ ಬುಧವಾರ ನಗರದ ಮಹಿಳೆ ಮತ್ತು ಮಕ್ಕಳ ಆಸ್ಪತ್ರೆಯಲ್ಲಿನ ಒಳ ರೋಗಿಗಳಿಗೆ ಹಣ್ಣು ಹಾಗೂ ಬ್ರೆಡ್‌ನ್ನು ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ನಗರಾಭೀವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಬದರಿನಾಥ್, ಡಿಎಚ್.ಓ.ಡಾ. ರವೀಂದ್ರ, ಕಲುರ್ಬುಗಿಯ ಪ್ರಾಧಿಕಾರದ ಅಧ್ಯಕ್ಷರಾದ ದೀಪಕ್ ಡಿ. ನ್ಯಾಯವಾದಿಗಳಾದ ಮುರಳಿ ಕೃಷ್ಣ, ನಗರಸಭಾ ಸದಸ್ಯರಾದ ಶಶಿಧರ್, ಕೇಶವಮೂರ್ತಿ, ಭಾನುಮೂರ್ತಿ, ಆದರ್ಶ, ಕಿಶೋರ್, ಪ್ರಮೋದ್ ಸೇರಿದಂತೆ ಇತರರು ಭಾಗವಹಿಸಿದ್ದರು.

### ಆಗಸ್ಟ್ 2 ಜ್ಞಾನದ ಬೆಳಕು ಕಾರ್ಯಕ್ರಮ

» ಹಿರಿಯೂರು

ಆಗಸ್ಟ್ 2 ರ ಶುಕ್ರವಾರ ತಾಲೂಕಿನ ಐಮಂಗಲ ಶ್ರೀ ಶಿವಶರಣ ಹರಳಯ್ಯ ಗುರು ಪೀಠದಲ್ಲಿ ಜ್ಞಾನದ ಬೆಳಕು ಕಾರ್ಯಕ್ರಮ ಏರ್ಪಡಿಸಲಾಗಿದೆ. ಶ್ರೀ ಬಸವ ಹರಳಯ್ಯ ಸ್ವಾಮಿಜಿ ಯವರು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಲಿದ್ದಾರೆ, ಮುಖ್ಯ ಅತಿಥಿಗಳಾಗಿ ನಾಗೇಶ್ ನಿವೃತ್ತ ಪ್ರಾಧ್ಯಾಪಕರು ಚಿತ್ರದುರ್ಗ. ಡಾ. ಉಮಾಶಂಕರ್ ಹಿರಿಯ ನಿವೃತ್ತ ವೈದ್ಯರು ಐಮಂಗಲ. ಸತೀಶ್ ರವರು ಆರಕ್ಷಕ ಠಾಣೆ, ಐಮಂಗಲ. ಕು. ಛಾಯ ಸಹ ಶಿಕ್ಷಕರು ಹರಳಯ್ಯ ಶಿಕ್ಷಣ ಸಂಸ್ಥೆ . ಮತ್ತಿತರರು ಭಾಗವಹಿಸಲಿದ್ದಾರೆ. ಕಾರ್ಯಕ್ರಮಕ್ಕೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕಾರ್ಯಕ್ರಮ ಸಂಯೋಜಕರು ಮನವಿ ಮಾಡಿದ್ದಾರೆ

# ಸಾಲು ಸಾಲು ಸೋಲು

## ಹೊದ್ದು ಮಲಗಿರುವಾಗ....



**ಕೆಟ್ಟ ಕೆಟ್ಟ ಕನಸುಗಳು ಕಾಡುತ್ತಿರುವಾಗ.....**

**ನೋವುಗಳೇ ಬೆಳಗಿನ ಕಿರಣಗಳಾಗಿ ತೂರಿ ಬರುತ್ತಿರುವಾಗ..... .**

**ಮತ್ತೆ ನಿದ್ರೆಯವರೆಗಿನ 14 ಗಂಟೆಗಳನ್ನು ಏಕಾಂಗಿಯಾಗಿ ಕಳೆಯುತ್ತಿರುವಾಗ......**

**ಒಂದು ಕಷ್ಟವನ್ನು ಮತ್ತೊಂದು ಕಷ್ಟ ಮೆಟ್ಟಿ ಮುನ್ನಡೆಯುತ್ತಿರುವಾಗ.....**

**ದೂರವಾಣಿಯ ರಿಂಗ್ ಟೋನ್ ಗಳು ಕರ್ಕಶ ಧ್ವನಿಯಂತೆ ಕಿವಿಗೆ ಅಪ್ಪಳಿಸುತ್ತಿರುವಾಗ....**

**ಬೀಡಿ ಸಿಗರೇಟು ಮದ್ಯಪಾನದ ಅಭ್ಯಾಸಗಳೂ ಇಲ್ಲದಿರುವಾಗ........**

**ನಾಲ್ಕು ಗೋಡೆಯ ಮಧ್ಯೆ ನಿಂತು ಕಿಟಕಿ ಸರಳಿನಾಚೆ ದೃಷ್ಟಿ ಹಾಯಿಸಿದಾಗ ಅಪ್ಪ ನೆನಪಾಗುತ್ತಾರೆ......**

'ಸುಳ್ಳನ್ನು ಎಂದೂ ಹೇಳಬೇಡ. ಅದು ಬೇರೆಯವರನ್ನು ವಂಚಿಸುವುದರ ಜೊತೆಗೆ ನಿನ್ನನ್ನೂ ವಂಚಿಸುತ್ತದೆ. ಮುಂದೆ ಅದೇ ಅಭ್ಯಾಸವಾಗಿ ಆತ್ಮವಂಚಕನಾಗುವೆ "

" ನಿನ್ನದಲ್ಲದ ಬೇರೆಯವರ ಆಸ್ತಿ ಹಣದ ಬಗ್ಗೆ ಮೋಹಿತನಾಗಬೇಡ. ಅದು ವಿಷದಂತೆ ಪಸರಿಸಿ ಮನಸ್ಸನ್ನು ಕೊಲ್ಲುತ್ತದೆ "

" ದ್ವೇಷ ಅಸೂಯೆಗಳು ನಮ್ಮ ಶತ್ರುವಿಗಿಂತ ನಮ್ಮನ್ನು ಹೆಚ್ಚು ಘಾಸಿಗೊಳಿಸುತ್ತವೆ "

" ಪ್ರೀತಿ ಕರುಣೆ ಕ್ಷಮಾಗುಣ ಎಷ್ಟು ಸಾಧ್ಯವೋ ಅಷ್ಟನ್ನೂ ಅಳವಡಿಸಿಕೋ "

" ಒಳ್ಳೆಯ ಕೆಲಸಗಳನ್ನು, ಇತರರಿಗೆ ಸಹಾಯವನ್ನು ನಿರಂತರವಾಗಿ ದೀರ್ಘಕಾಲ ಯಾವುದೇ ಒತ್ತಡವಿಲ್ಲದೆ



ಮಾಡಬಹುದು. ಆದರೆ ಇತರರಿಗೆ ತೊಂದರೆ ಕೊಡುವ, ಅವರನ್ನು ಅವಮಾನಿಸುವ ಕೆಲಸ ಹೆಚ್ಚು ಕಾಲ ಮಾಡಲು ಸಾಧ್ಯವಿಲ್ಲ "

" ನಿನ್ನ ಬಳಿ ಇರುವ ಹಣ ಆಸ್ತಿ ಅಧಿಕಾರ ಯಾವ ಕ್ಷಣದಲ್ಲಿ ಬೇಕಾದರೂ ಇಲ್ಲವಾಗಬಹುದು ಆದರೆ ನಿನ್ನೊಳಗಿನ ಜ್ಞಾನವನ್ನು ಯಾರೂ ಎಂದಿಗೂ ಕದಿಯಲು ಸಾಧ್ಯವಿಲ್ಲ "

" ವಿವೇಚನೆ ಇಲ್ಲದ ಉಡಾಫೆಯ ಲೋಕನಿಂದನೆಗೆ ಎಂದೂ ಮನ ನೋಯಿಸಿಕೊಳ್ಳಬೇಡ. ಆತ್ಮಸಾಕ್ಷಿಯ ಕರೆಗೆ ಓಗೊಟ್ಟು ನಿನ್ನ ಕರ್ತವ್ಯ ನಿರ್ವಹಿಸು "

" ಜ್ಞಾನವೇ ನಿನ್ನೊಳಗಿನ ಶಕ್ತಿ. ಅದು ನಿನ್ನ ನಡವಳಿಕೆಯಾಗಿ ಹರಿಯತೊಡಗಿದಾಗ ನಿನ್ನ ವ್ಯಕ್ತಿತ್ವ ಅನಾವರಣಗೊಳ್ಳುತ್ತದೆ "

" ಎಲ್ಲವೂ ವಿಫಲವಾದಾಗ ತಾಳ್ಮೆಯು ಸಫಲವಾಗುತ್ತದೆ "

ಹೀಗೆ ನಾನಾ ಸಂದರ್ಭದಲ್ಲಿ ನನ್ನ ಬೆಳವಣಿಗೆಯ ವಿವಿಧ ಹಂತಗಳಲ್ಲಿ ಅಪ್ಪ ಹೇಳುತ್ತಲೇ ಇದ್ದರು.

ಈಗ ಬದುಕಿನ ಇಳಿ ಸಂಜೆಯ ಹೊತ್ತಿನಲ್ಲಿ.......

ಆ ಗುಣಗಳ ದೌರ್ಬಲ್ಯವೋ,
ಅದರ ಆಚರಣೆಯ ಕೊರತೆಯೋ,
ಅದನ್ನು ಗ್ರಹಿಸುವಲ್ಲಿನ ವಿಫಲತೆಯೋ,
ಸಮಾಜದ ಬದಲಾವಣೆಗಳನ್ನು ಗಮನಿಸದ ಪೆದ್ದುತನವೋ,
ಸನ್ನಿವೇಶಕ್ಕೆ ತಕ್ಕಂತೆ ರೂಪಾಂತರ ಹೊಂದುವಲ್ಲಿ ಎಡವಿರುವುದೋ,
ಅದನ್ನು ಉಪಯೋಗಿಸಿಕೊಳ್ಳುವ ಅಸಾಮರ್ಥ್ಯವೋ,
ಮಿತಿ ಮೀರಿದ ಮಿತಿ ಅರಿಯದ ಮೂರ್ಖತನವೋ.....

ಒಟ್ಟಿನಲ್ಲಿ,
ಆ ಅಂಶಗಳೇ ಸೋಲಾಗಿ,
ನೋವಾಗಿ, ನಿರಾಸೆಯ ಬಾಗಿಲಿನ ಮುಂದೆ ತಂದು ನಿಲ್ಲಿಸಿವೆ.........

ಸಾಮಾಜಿಕ ಮೌಲ್ಯಗಳೆಂಬ ನೈತಿಕ ಪ್ರಜ್ಞೆ ಕುಸಿಯ ತೊಡಗಿರುವ ಸಂದರ್ಭದಲ್ಲಿ,
ಹಣವೇ ಬದುಕಿನ ಮೌಲ್ಯಗಳನ್ನು ನಿರ್ಧರಿಸುವ ಮಾನದಂಡವಾಗಿರುವಾಗ, ವೈಯಕ್ತಿಕ ನಂಬಿಕೆಯ ಮೌಲ್ಯಗಳು ಅದರೊಡನೆ ಸಂಘರ್ಷ ನಡೆಸುತ್ತಿರುವ ಸಮಯದಲ್ಲಿ ದಾರಿ ಕಾಣದೆ ಗೊಂದಲಗೊಂಡಿರುವುದು ನಿಜ.......

ಭ್ರಮಾಲೋಕದ ಭಾವನೆಗಳ ಬಂಧಿಯಾಗಿರುವ ವೇಗದ ಸಮಾಜದಲ್ಲಿ ವಾಸ್ತವ ಅರಿಯುವ ತಾಳ್ಮೆಯ ಗುಣ ಮರೆಯಾಗಿರುವಾಗ ಮೂಕ ರೋಧನೆಯಿಂದ ನರಳುತ್ತಿದ್ದರೂ....

ಅಪ್ಪ ಹಚ್ಚಿದ ಜ್ಞಾನದ ಬೆಳಕು ಈಗಲೂ ಮುನ್ನಡೆಯುವ ದಾರಿ ತೋರಿಸುತ್ತಿರುವುದು,
ಸತ್ಯಕ್ಕೆ ಸಾವಿಲ್ಲ,
ಪ್ರೀತಿ ಮಾನವೀಯತೆ ತಾಳ್ಮೆಗಿಂತ ಪ್ರಬಲ ಅಸ್ತ್ರಗಳಿಲ್ಲ ಎಂಬುದನ್ನು ಮತ್ತೆ ಮತ್ತೆ ದೃಢಪಡಿಸುತ್ತಿದೆ......
ಬತ್ತಿ ಹೋದ ಜೀವ ಸೆಲೆ
ಮತ್ತೆ ಚಿಮ್ಮುವ ನಿರೀಕ್ಷೆಯಲ್ಲಿ...
ಉತ್ತರವಿಲ್ಲದ ಪ್ರಶ್ನೆಗಳು ಈಗಲೂ ಕಿವಿಯಲ್ಲಿ ಗುಂಯ್ ಗುಡುತ್ತಿದೆ........
ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,
ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,
ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ,
ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ.
ಹೆಚ್.ಕೆ. 9844013068

## ಪ್ರಮುಖ ಸುದ್ದಿ

# ಮುಗ್ಧ ರೇಷ್ಮೆ ಸೀರೆ ಷೋ ರೂಂ ಡಾ.ಶಾಮನೂರು ಚಾಲನೆ

» ದಾವಣಗೆರೆ

ನಗರದ ಡೆಂಟಲ್ ಕಾಲೇಜು ರಸ್ತೆಯಲ್ಲಿರುವ ಮುಗ್ಧದ ರೇಷ್ಮೆ ಸೀರೆ ಅಂಗಡಿಯನ್ನು ಬುಧವಾರ ಶಾಸಕ ಡಾ.ಶಾಮನೂರು ಶಿವಶಂಕರಪ್ಪ ಉದ್ಘಾಟಿಸಿದರು.

ನಗರದ ಜನ ನಮ್ಮ ಹೃದಯಕ್ಕೆ ತುಂಬಾ ಹತ್ತಿರವಾಗಿದ್ದಾರೆ. ಕಳೆದ ಹಲವು ವರ್ಷಗಳಿಂದ ಕರ್ನಾಟಕದ ಜನರು ಎಷ್ಟು ಪ್ರೀತಿಯನ್ನು ನೀಡಿದ್ದಾರೆ, ಕರ್ನಾಟಕದ ನಮ್ಮ ನಾಲ್ಕು ಅಂಗಡಿಗಳು ಈ ಪ್ರೀತಿಗೆ ಉದಾಹರಣೆಯಾಗಿದೆ. ಈ ಸುಂದರ ನಗರದಲ್ಲಿ ನಾವು ಅನೇಕ ಆಪ್ತ ಸ್ನೇಹಿತರು ಮತ್ತು ಗ್ರಾಹಕರನ್ನು ಹೊಂದಿದ್ದೇವೆ. ವರ್ಷಗಳಲ್ಲಿ ನಮ್ಮ ಪ್ರೀತಿಯ ದಾವಣಗೆರೆಯ ಅನೇಕ ಗ್ರಾಹಕರು ನಮ್ಮ ಅಂಗಡಿಗಳಿಗೆ ಬೀಟ್ ಟ್ರಾವೆಲ್ ಡ್ಯಾಡಿ ಹೊಂದಿದ್ದಾರೆ. ಈ ಆಲೋಚನೆಯೊಂದಿಗೆ ನಾವು ರಾಜ್ಯದ ಐದನೇ ಅಂಗಡಿಯನ್ನು ತೆರೆದಿದ್ದೇವೆ. ಈ ಸುಂದರ ನಗರದಲ್ಲಿ ಮುಗ್ಧದ ಅನನ್ಯ ಮತ್ತು ಅದ್ಭುತ ಅನುಭವವನ್ನು ತರಲು ನಿರ್ಧರಿಸಿದ್ದೇವೆ. ಇದು ನಮಗೆ ತುಂಬಾ ಭಾವನಾತ್ಮಕ ಪ್ರಯಾಣವಾಗಿದೆ ಮತ್ತು ಈ ಆರಂಭವು ನಮಗೆ ಬಹುನಿರೀಕ್ಷಿತ ಉಡಾವಣೆಯಾಗಿದೆ.



ದಾವಣಗೆರೆಯಲ್ಲಿ ಮುಗ್ಧದ ಅತಿದೊಡ್ಡ ಐಷಾರಾಮಿ ಚಿಲ್ಲರೆ ಅಂಗಡಿಯನ್ನು ಪ್ರಾರಂಭಿಸಲು ನಾವು ಹೆಮ್ಮೆಪಡುತ್ತೇವೆ. ನಮ್ಮ ಗ್ರಾಹಕರಿಗೆ ವಿಶಿಷ್ಟವಾದ ಅನುಭವವನ್ನು ನೀಡುವಲ್ಲಿ ನಾವು ಯಾವಾಗಲೂ ಶ್ರಮಿಸುತ್ತಿದ್ದೇವೆ, ನಮ್ಮ ಅಂಗಡಿಯು ಅಂಗಡಿಯೊಳಗೆ ಭಗವಾನ್ ವೆಂಕಟೇಶ್ವರ ಸ್ವಾಮಿಯ ಅಡೋಬ್ ಹೊಂದಿರುವ ಸುಂದರವಾದ ದೇವಾಲಯವನ್ನು ನಿಮಗೆ ನೆನಪಿಸುತ್ತದೆ. ಅಂಗಡಿಯು ಭಾರತೀಯ ದೇವಾಲಯದ ವಾಸ್ತುಶಿಲ್ಪದಿಂದ ಪ್ರೇರಿತವಾಗಿದೆ, ಯಾರಾದರೂ ಅಂಗಡಿಯನ್ನು ಪ್ರವೇಶಿಸಿದ ತಕ್ಷಣ ಅವರು ಪವಿತ್ರ ಕಂಪನಗಳನ್ನು ಪಡೆಯುತ್ತಾರೆ. ಅಂಗಡಿಯು 15000 ಚದರ ಅಡಿಗಳಷ್ಟು ಹರಡಿದೆ. ಅಂಗಡಿಯ ಮುಂಭಾಗದಲ್ಲಿ ಭಗವಾನ್ ವೆಂಕಟೇಶ್ವರ ಸ್ವಾಮಿಯು ನಮ್ಮನ್ನು ಆಶೀರ್ವದಿಸುವುದರೊಂದಿಗೆ, ಇದು ದೇವಾಲಯದ ಒಳಗೆ ಶಾಪಿಂಗ್ ಮಾಡುವ ಸುಂದರ ಅನುಭವವನ್ನು ನೀಡುತ್ತದೆ. ಈ ಮಳಿಗೆಯು ನಮ್ಮ ಶ್ರೀಮಂತ ಪರಂಪರೆ ಮತ್ತು ನಮ್ಮ ದೇಶದ ಶ್ರೇಷ್ಠ ಕೈಮಗ್ಗಗಳಿಗೆ ವಿಶೇಷ ಗೌರವವಾಗಿದೆ. ಈ ಶ್ರೇಷ್ಠ ಕಲಾ ಪ್ರಕಾರದ ಭಾಗವಾಗಲು ನಾವು ಸಂತೋಷಪಡುತ್ತೇವೆ.ಭಾರತದಾದ್ಯಂತದ ಅತ್ಯುತ್ತಮ ಕುಶಲಕರ್ಮಿಗಳಿಂದ ನೇಯ್ದ, ಕಂಜೀವರಂಗಳಿಂದ ಹಿಡಿದು ಬೆನೆರಸಿ ಸೀರೆಗಳವರೆಗೆ, ಇಕ್ಕಟಾಸ್‌ನಿಂದ ಗದ್ವಾಲ್‌ಗಳವರೆಗೆ, ಪೈಥಾನಿಗಳಿಂದ ಉಪ್ಪಡಾಸ್‌ವರೆಗೆ ನಮ್ಮ ದಾವಣಗೆರೆ ಅಂಗಡಿಯು ನಗರದಲ್ಲಿನ ಅತಿದೊಡ್ಡ ಕೈಮಗ್ಗ ಸಂಗ್ರಹವನ್ನು ಹೊಂದಿದೆ. ಗ್ರಾಹಕರು ಫ್ಯಾನ್ಸಿ ಮತ್ತು ಡಿಸೈನರ್ ಸೀರೆಗಳ ಉತ್ತಮ ಮತ್ತು ವಿಶೇಷ ಸಂಗ್ರಹವನ್ನು ಸಹ ಕಾಣಬಹುದು.

ಜನಪ್ರಿಯ ಬೇಡಿಕೆಯ ಮೇರೆಗೆ ನಾವು ಈ ಬಾರಿ ಫ್ಯಾನ್ಸಿ ಸೀರೆಗಳೊಂದಿಗೆ ಬರುತ್ತಿದ್ದೇವೆ. ಆಧುನಿಕ ಮಹಿಳೆಯರನ್ನು ಗಮನದಲ್ಲಿಟ್ಟುಕೊಂಡು ವಧುವಿನ ಉಡುಗೆಗಳನ್ನು ಪ್ರೇರೇಪಿಸಲಾಗಿದೆ, ಬಣ್ಣಗಳು ತುಂಬಾ ಸೊಗಸಾಗಿವೆ ಮತ್ತು ಋತುಮಾನಕ್ಕೆ ಸರಿಹೊಂದುತ್ತವೆ. ಒಟ್ಟಾರೆಯಾಗಿ ಅತ್ಯಂತ ಕೈಗೆಟುಕುವ ಬೆಲೆಯಲ್ಲಿ ಒಂದು ಸ್ಟಾಪ್ ವೆಡ್ಡಿಂಗ್ ಶಾಪಿಂಗ್ ಡೆಸ್ಟಿನೇಶನ್. ಎಲ್ಲವನ್ನೂ ಇಟ್ಟುಕೊಂಡಿದ್ದೇವೆ. ನಮ್ಮ ಆತ್ಮೀಯ ಗ್ರಾಹಕರಿಗೆ ಮಾತ್ರ ನೇಕಾರರ ಬೆಲೆಯಲ್ಲಿ ಅಂದರೆ 500 ರೂ.ನಿಂದ ಹಿಡಿದರು 25 ಸಾವಿರ ರೂ.ವರೆಗೆ ನಮ್ಮ ಸೀರೆಗಳು ಲಭ್ಯ ಇವೆ. ಬೆಂಗಳೂರು ದೇಶದಾದ್ಯಂತ 25 ಶಾಪ್ ಗಳು ಇದ್ದು, ಬೆಂಗಳೂರಿನಲ್ಲಿ 4 ಶಾಪ್ ಗಳು ಇದು 26ನೇ ಶಾಪ್ ಆಗಿದೆ. ಎಂದು ಕಂಪನಿ ಸಿಇಒ ಸ್ವಾಮಿ, ನಿರ್ದೇಶಕ ರಾಜೇಶ್ ತಿಳಿಸಿದರು. ಈ ಸಂದರ್ಭದಲ್ಲಿ ಕೊಟ್ರೇಶ್ ಸೇರಿದಂತೆ ಮುಗ್ಧ ಕಂಪನಿಯ ಸದಸ್ಯರು ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T